ಸಂಪುಟ 01 । ಸಂಚಿಕೆ 130 । ಶನಿವಾರ 28 ಮಾರ್ಚ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಪಿಯಾನೋ ದಿನ

ವಿಶ್ವ ಪಿಯಾನೋ ದಿನವನ್ನು ಪ್ರಪಂಚದಾದ್ಯಂತ ಬಹಳ ಸಂತೋಷ ಮತ್ತು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಸಂಗೀತದ ನಾವೀನ್ಯತೆಯನ್ನು ಮುನ್ನಡೆಸುವ ಮತ್ತು ಪಿಯಾನೋ ನುಡಿಸುವ ಆನಂದವನ್ನು ಹರಡುವ ಪಿಯಾನೋ ಸಂಬಂಧಿತ ಉಪಕ್ರಮಗಳಿಗೆ ವೇದಿಕೆಯನ್ನು ಒದಗಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ

## ಸುಭಾಷಿತ

ಜೀವನ ಎಂಬುದು ಸೈಕಲ್ ಸವಾರಿ ಇದ್ದಂತೆ. ಹದ ತಪ್ಪಬಾರದೆಂದರೆ, ನೀವು ಚಲನಶೀಲರಾಗಿಯೇ ಇರಬೇಕಾಗುತ್ತದೆ.

–ಅಲ್ಬರ್ಟ್ ಐನ್‌ಸ್ಟೀನ್

## ಏಪ್ರಿಲ್ 1ರಂದು ಪೂರ್ವಭಾವಿ ಸಭೆ

ನೈಜ್ಯ ದೇಸೆ ನ್ಯೂಸ್

ರಾಯಚೂರು: ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ



ಸಭೆಯು ಏಪ್ರಿಲ್ 1ರ ಸಂಜೆ ಸಂಜೆ 4 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಸಂಬಂಧಿಸಿದ ಅಧಿಕಾರಿಗಳು ಮತ್ತು ಸಂಘ– ಸಂಸ್ಥೆಗಳ ಮುಖಂಡರು ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನೈಜ್ಯ ದೇಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಮುನಿಸಿಕೊಂಡ ವೋಟ್ ಬ್ಯಾಂಕ್

## ಕಾಂಗ್ರೆಸ್‌ಗೆ ಅಗ್ನಿ ಪರೀಕ್ಷೆಯಾದ ಉಪಚುನಾವಣೆ



ಬೆಂಗಳೂರು: ವಿವಿಧ ಕಾರಣಗಳಿಂದಾಗಿ ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಮತ ಬ್ಯಾಂಕ್ ವ್ಯತ್ಯಯಗೊಂಡಿದ್ದು ಉಪಚುನಾವಣೆಗಳಲ್ಲಿ ಅಗ್ನಿ ಪರೀಕ್ಷೆ ಎದುರಾಗಿದೆ.ಕಾಂಗ್ರೆಸ್‌ಗೆ ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ ಮತ್ತು ಪಂಗಡ ಸಾಂಪ್ರದಾಯಿಕ ಮತ ಬ್ಯಾಂಕ್‌ಗಳಾಗಿದ್ದವು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದಾಗಿ ಹಿಂದುಳಿದ ವರ್ಗಗಳ ಮತಗಳು ಕೊಂಚ ಪ್ರಮಾಣದಲ್ಲಿ ಏರಿಕೆಯಾಗಿದ್ದವು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂಬ ಹಿನ್ನೆಲೆಯಲ್ಲಿ ಹಳೇ ಮೈಸೂರು ಭಾಗದಲ್ಲಿ ಒಕ್ಕಲಿಗ ಸಮುದಾಯ ಬಲವಾಗಿ ಕಾಂಗ್ರೆಸ್‌ನ ಬೆನ್ನಿಗೆ ನಿಂತಿತ್ತು. ಎಂ.ಬಿ.ಪಾಟೀಲ್, ಶ್ಯಾಮನೂರು ಶಿವಶಂಕರಪ್ಪ ಅವರಿಂದಾಗಿ ಲಿಂಗಾಯತ ಮತಗಳು ಕಾಂಗ್ರೆಸ್‌ನತ್ತ ಒಲಿದಿದ್ದವು. ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನ ಸೋಷಿಯಲ್ ಎಂಜಿನಿಯರಿಂಗ್ ಉತ್ತಮವಾಗಿ ಕೆಲಸ ಮಾಡಿತ್ತು. ಹೀಗಾಗಿ ನಿರೀಕ್ಷೆಯನ್ನು ಮೀರಿ 139 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಕಂಡಿದ್ದರು. ಆದರೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರು, ಪರಿಶಿಷ್ಟರು ಮತ್ತು ಹಿಂದುಳಿದ ವರ್ಗಗಳಿಗೆ ಕೊಟ್ಟಿದ್ದಂತಹ ಮಾತನ್ನು ಉಳಿಸಿಕೊಳ್ಳುವಲ್ಲಿ ನಿರ್ಲಕ್ಷ್ಯ ವಹಿಸಿದೆ. ಪಂಚಖಾತ್ರಿ ಯೋಜನೆಗಳ ಅನುಷ್ಠಾನದಿಂದಾಗಿ ಆರ್ಥಿಕ ಹೊರೆಯಾಗಿದೆ ಎಂಬ ನೆಪ ಒಡ್ಡಿ ಚುನಾವಣೆಯ ವೇಳೆ ನೀಡಿದ್ದ ಬಹುತೇಕ ಭರವಸೆಗಳನ್ನು ಕಡೆಗಣಿಸಲಾಗಿದೆ. ಈ ಬಗ್ಗೆ ಸಾಂಪ್ರದಾಯಿಕ ಮತ ಬ್ಯಾಂಕ್‌ಗಳಾಗಿರುವ ಸಮುದಾಯಗಳಲ್ಲಿ ಅಸಮಾಧಾನ ಹೊಗೆಯಾಡುತ್ತಿದೆ. ಸಾಲದೆಂಬಂತೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡದೆ ವಂಚನೆ ಮಾಡಿರುವುದರಿಂದ ಮುಸ್ಲಿಂ ಸಮುದಾಯ ಕಾಂಗ್ರೆಸ್ ವಿರುದ್ಧ ಸೆಟೆದು ನಿಂತಿದೆ. ಅಲ್ಪಸಂಖ್ಯಾತರಿಗೆ ಬಿಜೆಪಿ ಆಪ್ತವಲ್ಲ. ಹೀಗಾಗಿ ಕಾಂಗ್ರೆಸ್ ಬಿಟ್ಟು ಎಲ್ಲೂ ಹೋಗುವುದಿಲ್ಲ ಎಂಬ ಹುಂಬತನದಿಂದ ನಾಯಕರು ವರ್ತಿಸುತ್ತಿದ್ದಾರೆ. ಈ ಧೋರಣೆಗಳೇ ಅಲ್ಪಸಂಖ್ಯಾತ ನಾಯಕರನ್ನು ಕೆರಳುವಂತೆ ಮಾಡಿದೆ. ಒಂದು ವೇಳೆ ಬಿಜೆಪಿಗೆ ಮತ ಹಾಕಲು ಇಷ್ಟವಿಲ್ಲದಿದ್ದರೆ ನೋಟಾ ಚಲಾಯಿಸುತ್ತೇವೆ.

ಆದರೆ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವುದಿಲ್ಲ ಎಂಬ ಹಠಕ್ಕೆ ಅಲ್ಪಸಂಖ್ಯಾತ ಸಮುದಾಯ ಬಂದಂತಿದೆ. ಅಸಮಾಧಾನಗೊಂಡಿರುವ ಸಮುದಾಯವನ್ನು ಮನವೊಲಿಸುವ ಬದಲಾಗಿ ಕಾಂಗ್ರೆಸ್ ನಾಯಕರು ಬಿಜೆಪಿಯ ಗುಮ ತೋರಿಸಿ, ಬೆದರಿಸುವ ಪ್ರಯತ್ನ ಮಾಡುತ್ತಿದ್ದಾರೆ. ಇದು ಉಪಚುನಾವಣೆಯಲ್ಲಿ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ಅಲ್ಪಸಂಖ್ಯಾತ ಸಮುದಾಯದ ಪ್ರಭಾವಿ ನಾಯಕರು ಚುನಾವಣಾ ಕಣದಲ್ಲಿರುವುದರಿಂದ ಕಾಂಗ್ರೆಸ್‌ನ ಆತಂಕ ಹೆಚ್ಚಾಗಿದೆ. ಮತ್ತೊಂದೆಡೆ ಒಳಮೀಸಲಾತಿಯ ವಿಷಯದಲ್ಲಿ ಕಾಂಗ್ರೆಸ್ ಪಕ್ಷ ನಡೆದುಕೊಂಡ ರೀತಿಗೆ ಪರಿಶಿಷ್ಟ ಜಾತಿಗಳಲ್ಲಿ ತೀವ್ರವಾದ ಆಕ್ರೋಶಗಳಿವೆ.

ಒಳಮೀಸಲಾತಿಯನ್ನು ಜಾರಿಗೊಳಿಸಿದ್ದೇವೆ ಎಂದು ಹೇಳಿ ಎಡಗೈ ಸಮುದಾಯವನ್ನು ಒಲಿಸಿಕೊಳ್ಳಲು ಕಾಂಗ್ರೆಸ್ ನಾಯಕರು ಯತ್ನಿಸಿದ್ದರು. ಅದು ಒಂದು ಹಂತದಲ್ಲಿ ಯಶಸ್ವಿಯಾಗಿತ್ತು. ಆದರೆ, ರೋಸ್ಟರ್‌ಬಿಂದು ವಿಚಾರದಲ್ಲಿ ಅನ್ಯಾಯವಾಗಿದೆ ಎಂದು ಪರಿಶಿಷ್ಟ ಜಾತಿಯಲ್ಲಿನ ಬಲಗೈ ಸಮುದಾಯ ಸಿಡಿದು ನಿಂತಿದೆ. ಹೀಗಾಗಿ ಒಳಮೀಸಲಾತಿ 2ನೇ ಪುಟಕ್ಕೆ

## ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ ಬಸವಣ್ಣೆಪ್ಪ ಕಲಶೇಟ್ಟಿ




ನೈಜ್ಯ ದೇಸೆ ನ್ಯೂಸ್

ಲಿಂಗಸಗೂರು: ಬೇಸಿಗೆ ಕಾಲದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಿ ಮತ್ತು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಪಂಚಾಯತ್ ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೇಟ್ಟಿ ಹೇಳಿದರು.

ಅವರಿಂದು ತಮ್ಮ ಕಚೇರಿಯಲ್ಲಿ ನಡೆಸಿದ ಕುಡಿಯುವ ನೀರಿನ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಾ. ಕ್ಷೇತ್ರದ ಸುಮಾರು 140 ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ನೀರಿನ ಕೊರತೆ ಉಂಟಾಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸಿದಲ್ಲಿ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ತಾಲೂಕಿನ ಸುಮಾರು 21 ಗ್ರಾಮಗಳಲ್ಲಿ ಬೇಸಿಗೆ ವೇಳೆ ಕುಡಿಯುವ ನೀರಿನ ಅಭಾವ ಉಂಟಾಗುವ ಸಾಧ್ಯತೆಗಳಿದ್ದು, ಹಲವು ಬೋರ್‌ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ಕುಸಿಯುವ ಲಕ್ಷಣಗಳು ಗೋಚರಿಸುತ್ತಿವೆ.

ಇದನ್ನು ಮನಗಂಡು ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಕೆಲಸ ಕೈಗೊಳ್ಳಬೇಕು ಜನರಿಗೆ ಆಡಳಿತ ನ್ಯಾಯ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ ಯಾಗಿದೆಯೆಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಸತ್ಯಮ್ಮ, ತಾಲೂಕು ಪಂಚಾಯತ್ ಅಧಿಕಾರಿ ಉಮೇಶ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರವೀಂದ್ರ ಉಪ್ಪಾರ, ಜೆಸ್ಕಾಂ ಅಧಿಕಾರಿ ಬನ್ನಪ್ಪ ಕರಿಬಂಟನಾಳ, ಬಿಇಒ ಸುಜಾತಾ ಹೂನೂರು, ಅಮರೇಶ್ ಪಾಟೀಲ, ನಟರಾಜ್, ಜಗನ್ನಾಥ ಜೋಶಿ, ಪ್ರವೀಣ ಭೋಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

## ಅದ್ದೂರಿಯಾಗಿ ಜರುಗಿದ ಶ್ರೀ ತ್ರಿಯಂಭಕೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವ

ನೈಜ್ಯ ದೇಸೆ ನ್ಯೂಸ್



ಕವಿತಾಳ: ಪಟ್ಟಣದ ಆರಾಧ್ಯ ದೈವ ಶ್ರೀ ತ್ರಿಯಂಭಕೇಶ್ವರ ವಾರ್ಷಿಕ ಜಾತ್ರಾ ಮಹೋತ್ಸವವು ಶ್ರೀರಾಮನವಮಿಯ ಪವಿತ್ರ ದಿನದಂದು ಅತ್ಯಂತ ಸಡಗರ–ಸಂಭ್ರಮ ಹಾಗೂ ಸಕಲ ಧಾರ್ಮಿಕ ವಿಧಿವಿಧಾನಗಳೊಂದಿಗೆ ಅದ್ದೂರಿಯಾಗಿ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಮುಂಜಾನೆಯಿಂದಲೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಭಿಷೇಕ ಹಾಗೂ ಅಲಂಕಾರ ಕಾರ್ಯಕ್ರಮಗಳು ನಡೆದವು.ಶ್ರೀ ತ್ರಿಯಂಭಕೇಶ್ವರ ವಿಶೇಷ ಪುಷ್ಪಾಲಂಕಾರ ಮಾಡಲಾಗಿತ್ತು.ಈ ಭವ್ಯ ಮೆರವಣಿಗೆಯಲ್ಲಿ ಕವಿತಾಳ ಪಟ್ಟಣ ಮಾತ್ರವಲ್ಲದೆ, ಸುತ್ತಮುತ್ತಲಿನ ಹತ್ತಾರು ಹಳ್ಳಿಗಳ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

## ಮಾನವಿ ಪುರಸಭೆಯಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

ನೈಜ್ಯ ದೇಸೆ ನ್ಯೂಸ್




ರಾಯಚೂರು: ಜಿಲ್ಲೆಯ ಮಾನವಿ ಪಟ್ಟಣದ ಪುರಸಭೆಯಿಂದ 2026–27ನೇ ಸಾಲಿಗಾಗಿ ಶೇ.7.25 ಯೋಜನೆಯಡಿ ಇತರೆ ಜನಾಂಗದವರಿಗೆ ಎಸ್.ಎಫ್.ಸಿ. ಅನುದಾನದಲ್ಲಿ ಶಸ್ತ್ರ ಚಿಕಿತ್ಸೆ ಒಳಪಟ್ಟ ರೋಗಿಗಳಿಗೆ ಸಹಾಯ ಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಅರ್ಜಿಯೊಂದಿಗೆ 2 ಭಾವಚಿತ್ರಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ರೇಷನ್ ಕಾರ್ಡ್, ಆಸ್ಪತ್ರೆಯಲ್ಲಿ ಅಡಮಿಟ್ ಆದ ಮತ್ತು ಡಿಸ್ಚಾರ್ಜ ಆದ ಕಾರ್ಡಗಳು, ಶಸ್ತ್ರ ಚಿಕಿತ್ಸೆಗೆ ಒಳಪಟ್ಟ ವೈದ್ಯಕೀಯ ಎಕ್ಸ–ರೇ, ಸ್ಕ್ಯಾನಿಂಗ್, ರಕ್ತಪರೀಕ್ಷೆಗಳ ದಾಖಲೆಗಳು, ಜಿಲ್ಲಾ ಅಥವಾ ತಾಲ್ಲೂಕು ಸರಕಾರಿ ವೈದ್ಯಿಕಾರಿಗಳಿಂದ ದೃಢೀಕರಣ ಪತ್ರ, ವೈದ್ಯಕೀಯಕ್ಕೆ ಸಂಬಂಧಿಸಿದ ಬಿಲ್‌ಗಳು, ಬ್ಯಾಂಕ್ ಪಾಸ್ ಪುಸ್ತಕದೊಂದಿಗೆ ಏಪ್ರಿಲ್ 15 ರೊಳಗಾಗಿ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಳಜಾಡಲದಿನ್ನಿಯಲ್ಲಿ ಗಾಯರಾಣು ಭೂಮಿ ಒತ್ತುವರಿ ತೆರವಿಗೆ ಆಗ್ರಹ

ನೈಜ್ಯ ದೇಸೆ ನ್ಯೂಸ್



ಅರಕೇರಾ: ತಾಲೂಕಿನ ಹಾಳಜಾಡಲದಿನ್ನಿ ಗ್ರಾಮದಲ್ಲಿ ಅತಿಕ್ರಮಣ ಮಾಡಿರುವ ಸರ್ಕಾರಿ ಗಾಯರಾಣು ಭೂಮಿಯನ್ನು ತೆರವುಗೊಳಿಸಿ ಗ್ರಾಮದ ಅಭಿವೃದ್ಧಿಗೆ ತಕ್ಷಣ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ ತಹಸೀಲ್ ಕಚೇರಿ ಮುಂದೆ ಗ್ರಾಮದ ಪ್ರಮುಖರು ಪ್ರತಿಭಟನೆ ನಡೆಸಿದರು.

ತಹಸೀಲ್ದಾರ್ ಅಮರೇಶ ಬಿರಾದರ್‌ಗೆ ಶುಕ್ರವಾರ ಮನವಿ ಸಲ್ಲಿಸಿ, ಸುಮಾರು 50 ಎಕರೆ ಸರ್ಕಾರಿ ಗಾಯರಾಣು ಭೂಮಿ ಅಕ್ರಮವಾಗಿ ಕೆಲವು ಖಾಸಗಿ ವ್ಯಕ್ತಿಗಳಿಂದ ಅತಿಕ್ರಮಣಗೊಂಡಿದೆ. ಈ ಭೂಮಿಯನ್ನು ಅತಿಕ್ರಮಿಸಿಕೊಂಡಿರುವವರು ನಿರ್ಗತಿಕರು ಅಥವಾ ಭೂಹೀನರು ಅಲ್ಲ. ಇವರು ಆರ್ಥಿಕವಾಗಿ ಸ್ಥಿತಿವಂತರಾಗಿದ್ದು, ಈಗಾಗಲೇ ಸಾಕಷ್ಟು ಭೂಮಿ ಹಾಗೂ ಸ್ವಂತ ಮನೆಗಳನ್ನು ಹೊಂದಿದ್ದಾರೆ. ಆದರೂ, ಸರ್ಕಾರಿ ಭೂಮಿಯನ್ನು ಕಬಳಿಸಿಕೊಂಡು, ಸಾರ್ವಜನಿಕ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದಾರೆ ಎಂದು ದೂರಿದರು.

ಗ್ರಾಮಸ್ಥರು ಈ ಅಕ್ರಮವನ್ನು ಪ್ರಶ್ನಿಸಿದಾಗ, ಅತಿಕ್ರಮಣಕಾರರು ಬೆದರಿಕೆ ಹಾಕುವುದು. ಯಾರಿಗೆ ಬೇಕಾದರೂ ದೂರು ನೀಡಿ, ನಮಗೆ ಯಾವುದಕ್ಕೂ ಭಯವಿಲ್ಲ ಎಂಬ ರೀತಿಯಲ್ಲಿ ಅಹಂಕಾರ ತೋರಿಸುವುದು ನಡೆಯುತ್ತಿದೆ. ಇದೇ ವಿಚಾರವಾಗಿ ನಾವು ಗ್ರಾಮಸ್ಥರು ತಹಸೀಲ್ದಾರ್ ಕಚೇರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಇಂದಿನವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಬೇಸರ ವ್ಯಕ್ತಪಡಿಸಿದರು. ಗ್ರಾಮದಲ್ಲಿ ನಿರ್ಮಾಣವಾಗಬೇಕಿದ್ದ ಶಾಲಾ ಕಟ್ಟಡ, ಮಕ್ಕಳಿಗಾಗಿ ಆಟದ ಮೈದಾನ, ಸಾರ್ವಜನಿಕ ಉಪಯೋಗಕ್ಕಾಗಿ ರುದ್ರಭೂಮಿ, ಪಶುಗಳಿಗೆ ಅಗತ್ಯವಾದ ಗೋಮಾಳ ಭೂಮಿ, ಅಂಗನವಾಡಿ ಕೇಂದ್ರ, ಬಸ್ ನಿಲ್ದಾಣ ಸೇರಿದಂತೆ ಅನೇಕ ಸರ್ಕಾರಿ ಯೋಜನೆಗಳು ಅತಿಕ್ರಮಣದ ಕಾರಣದಿಂದ ನಿಂತು ಹೋಗಿವೆ.

ಮಾನ್ಯ ದಯಾಳುಗಳಾದ ತಾವುಗಳು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಅತಿಕ್ರಮಣಗೊಂಡಿರುವ ಸರ್ಕಾರಿ ಗಾಯರಾಣು ಭೂಮಿಯನ್ನು ತಕ್ಷಣ ಸರ್ವೇ ನಡೆಸಿ ಗುರುತಿಸಬೇಕು. ಅತಿಕ್ರಮಣಕಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಅತಿಕ್ರಮಣವನ್ನು ತುರ್ತು ಆಧಾರದ ಮೇಲೆ ತೆರವುಗೊಳಿಸಬೇಕು. ಗ್ರಾಮದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ಪ್ರಮುಖರಾದ ರಂಗಯ್ಯ ಮಾಲಿಗೌಡ, ಅಂಜಿನಯ್ಯ ಕಟ್ಟಿಮನಿ, ರವಿಚಂದ್ರ ನಾಯಕ, ಚಂದ್ರಶೇಖರ ನಾಯಕ, ಶಶಿಕುಮಾರ ನಾಯಕ, ಶಿವಲಿಂಗಪ್ಪ ನಾಯಕ, ರಾಮಕೃಷ್ಣ ನಾಯಕ, ಬಸವರಾಜ ಮಾಲಿಗೌಡ, ನಾಗರಾಜ ಗುತ್ತೆದಾರ, ಕನಕಪ್ಪ ನಾಯಕ, ಆಂಜಿನಯ್ಯ ನಾಯಕ, ಮೌನೇಶ ಗುತ್ತೇದಾರ, ರಂಗನಾಥ ನಾಯಕ, ಸುರೇಶ ನಾಯಕ, ನಾಗರಾಜ ಹರಿಜನ, ರಮೇಶ ನಾಯಕ, ಶಿದ್ದಲಿಂಗ ಗುತ್ತೇದಾರ, ಚಂದ್ರಶೇಖರ ಗುತ್ತೇದಾರ, ಲಚಮಣ್ಣ ಮಡಿವಾಳ, ಗೋಪಾಲ ನಾಯಕ, ಸುರೇಶ ಹೂಗಾರ, ರಾಮಸ್ವಾಮಿ ನಾಯಕ, ಹನುಮಂತ ನಾಯಕ, ಯಲ್ಲನಗೌಡ ನಾಯಕ, ರವಿ ಹರಿಜನ, ಬಿಕಪ್ಪ ನಾಯಕ, ಆಂಜಿನಯ್ಯ ನಾಯಕ, ರಮೇಶ ಗುತ್ತೇದಾರ, ಶ್ರೀಧರ ಗೊಲ್ಲರ ಇದ್ದರು.

27 ಅರಕೇರಾ 01 : ಅರಕೇರಾದಲ್ಲಿ ತಹಸೀಲ್ದಾರ್ ಅಮರೇಶ ಬೀರಾದರ್‌ಗೆ ಹಾಳ ಜಾಡಲದಿನ್ನಿ ಗ್ರಾಮಸ್ಥರು ಶುಕ್ರವಾರ ಮನವಿ ಸಲ್ಲಿಸಿದರು.

## ಸಾಹಿತ್ಯ ಸಿಂಚನ

ಕಟುದಿಟ ಬೆಳಕಿನ ಸಾಲುಗಳು..!

ಇರಿಯಬೇಕೆಂದವರಿಗೆ ಚಾಕು
ಚೂರಿಗಳೇ ಬೇಕೆಂದೇನಿಲ್ಲ
ಹರಿತ ನಾಲಿಗೆಯೇ ಸಾಕು.!

ಝರಿಯಬೇಕೆಂದವರಿಗೆ ಕೊಂಕು
ಕಲಹಗಳೇ ಬೇಕೆಂದೇನಿಲ್ಲ
ಹಸಿಹುಸಿ ಕಾರಣ ಸಾಕು.!

ತೊರೆಯಬೇಕೆಂದವರಿಗೆ ಸಿಡುಕು
ಘಟನೆಗಳೇ ಬೇಕೆಂದೇನಿಲ್ಲ
ತಟ್ಟನೊಂದು ಘರ್ಷಣೆ ಸಾಕು.!

ಕೆರೆಯಬೇಕೆಂದವರಿಗೆ ಕೆದುಕು
ಸಂಗತಿಗಳೇ ಬೇಕೆಂದೇನಿಲ್ಲ
ಸಣ್ಣದೊಂದು ಸಂಘರ್ಷ ಸಾಕು.!

ಮರೆಯಬೇಕೆಂದವರಿಗೆ ಕೆಡಕು
ನೆನಪುಗಳೇ ಬೇಕೆಂದೇನಿಲ್ಲ
ಚಿಕ್ಕದೊಂದು ನೆಪ ಸಾಕು.!

ಉರಿಯಬೇಕೆಂದವರಿಗೆ ಕುಟುಕು
ಕಿಡಿಗಳೇ ಬೇಕೆಂದೇನಿಲ್ಲ
ಮೆಲ್ಲನೆ ನುಡಿಯೇ ಸಾಕು.!

ತರಿಯಬೇಕೆಂದವರಿಗೆ ತೊಡಕು
ತಪ್ಪುಗಳೇ ಬೇಕೆಂದೇನಿಲ್ಲ
ತಣ್ಣನೆ ತಡಿಯೇ ಸಾಕು.!

ಹುರಿಯಬೇಕೆಂದವರಿಗೆ ಹರಕು
ಹುರುಕುಗಳೇ ಬೇಕೆಂದೇನಿಲ್ಲ
ಬಿಸಿ ಹುಡಿಯೊಂದು ಸಾಕು.!

ಮೊರೆಯಬೇಕೆಂದವರಿಗೆ ಮುಲುಕು
ತಕರಾರುಗಳೇ ಬೇಕೆಂದಿಲ್ಲ
ಪುಟ್ಟಪೊಳ್ಳು ಪುಕಾರು ಸಾಕು.!

ಸರಿಯಬೇಕೆಂದವರಿಗೆ ರಂಕು
ರಗಳೆಗಳೇ ಬೇಕೆಂದೇನಿಲ್ಲ
ಕ್ಷುಲ್ಲಕ ಕ್ಷಣವೊಂದು ಸಾಕು.!

ಹರಿಯಬೇಕೆಂದವರಿಗೆ ಒಡಕು
ಒದರಾಟಗಳೇ ಬೇಕೆಂದೇನಿಲ್ಲ
ಕಿರು ದಾರದೆಳೆಯೇ ಸಾಕು.!

ಗೀರಲೇಬೇಕೆಂದವರಿಗೆ ಚುರುಕು
ಮದ್ದುಪೊಟ್ಟಣವೇ ಬೇಕೆಂದಿಲ್ಲ
ಮೌನ ಕಣಗಳೇ ಸಾಕು.!

ಎ.ಎನ್.ರಮೇಶ್. ಗುಬ್ಬಿ.

1ನೇ ಪುಟದಿಂದ....

ಜಾರಿಗಾಗಿ ಈ ಮೊದಲು ಹೊರಡಿಸಿದ್ದ ಆದೇಶವನ್ನು ಸರ್ಕಾರ ಹಿಂಪಡೆದಿದೆ. ಮಿಸಲಾತಿ ಹೆಚ್ಚಳವನ್ನು ಕೈಬಿಟ್ಟು ಈ ಮೊದಲಿನ ವ್ಯವಸ್ಥೆಯಲ್ಲೇ 56 ಸಾವಿರ ಹುದ್ದೆಗಳಿಗೆ ನೇಮಕಾತಿ ಮಾಡಲು ಮುಂದಾಗಿದೆ. ಶೇ.19ರ ಬದಲಾಗಿ ಶೇ. 17ರ ಮೀಸಲಾತಿ ಪ್ರಮಾಣದಲ್ಲಿ ಹಾಗೂ ಒಳಮೀಸಲಾತಿ ರಹಿತವಾಗಿ ನೇಮಕಾತಿ ನಡೆಸುವುದರಿಂದ ಪರಿಶಿಷ್ಟ ಸಮುದಾಯಕ್ಕೆ ಶೇ. 2ರಷ್ಟು ಅನ್ಯಾಯವಾಗಲಿದೆ ಎಂದು ಅಸಮಾಧಾನ, ಮೀಸಲು ಪಟ್ಟಿಯಲ್ಲಿರುವ 101 ಜಾತಿಗಳಲ್ಲೂ ಕಾಡುತ್ತಿದೆ. ಜೊತೆಗೆ ಒಳಮೀಸಲಾತಿ ಜಾರಿಗೊಳಿಸಿಲ್ಲ ಎಂಬ ಅಸಹನೆ ಎಡಗೈ ಸಮುದಾಯದ್ದಾಗಿದ್ದರೆ, ತಪ್ಪು ನಿರ್ಧಾರದ ಮೂಲಕ ತಮಗೆ ಅನ್ಯಾಯ ಮಾಡಲಾಗಿದೆ ಎಂಬ ಆಕ್ರೋಶ ಬಲಗೈ ಸಮುದಾಯದ್ದಾಗಿದೆ. ಹೀಗಾಗಿ ಪರಿಶಿಷ್ಟ ಜಾತಿಗಳು ಕಾಂಗ್ರೆಸ್ ಪಕ್ಷದಿಂದ ದೂರ ಸರಿಯುತ್ತಿದ್ದು, ಮತ ಬ್ಯಾಂಕಿನ ಚಿಂತೆ ಹೆಚ್ಚಾಗಿದೆ. ಬಿಜೆಪಿ ಚುನಾವಣೆಯ ತಂತ್ರದ ಭಾಗವಾಗಿ ದಾವಣಗೆರೆ ದಕ್ಷಿಣ ಕ್ಷೇತ್ರದ ಸಾಮಾನ್ಯ ಕ್ಷೇತ್ರಕ್ಕೆ ಪರಿಶಿಷ್ಟ ಪಂಗಡದ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಯಾರೇ ಭ್ಯರ್ಥಿಗಳಾಗಿದ್ದರೂ ಬಿಜೆಪಿಯ ಕನಿಷ್ಠ 15 ರಿಂದ 20ರಷ್ಟು ಮತಗಳಿಕೆಯ ಸಾಮಥ-ರ್್ಯ ಯಥಾವತ್ತು ಇರಲಿದೆ. ಪರಿಶಿಷ್ಟ ಪಂಗಡದ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವುದರಿಂದಾಗಿ ಸದರಿ ಸಮುದಾಯದ ಮತಗಳಿಕೆ ಬಿಜೆಪಿಗೆ ಬಹುತೇಕ ಖಚಿತ ಎನ್ನಲಾಗಿದೆ. ಪರಿಶಿಷ್ಟ ಸಮುದಾಯದ ಕೆ.ಎನ್.ರಾಜಣ್ಣ ಹಾಗೂ ಬಿ. ನಾಗೇಂದ್ರ ಅವರನ್ನು ಸಂಪುಟದಿಂದ ಹೊರ ಹಾಕಿರುವುದರಿಂದ ಸಮುದಾಯ ಕಾಂಗ್ರೆಸ್ ವಿರುದ್ಧ ಅಸಮಾಧಾನ ಹೊಂದಿದೆ. ಬಿಜೆಪಿ ಈ ಪರಿಸ್ಥಿತಿಗಳನ್ನು ತನ್ನ ಅನುಕೂಲಕ್ಕೆ ಬಳಸಿಕೊಳ್ಳುವ ಪ್ರಯತ್ನ ನಡೆಸಿದೆ. ಪ್ರತಿತಂತ್ರವಾಗಿ ಕಾಂಗ್ರೆಸ್ ವೀರಶೈವ ಲಿಂಗಾಯತ ಸಮುದಾಯದ ಮಠಾಧೀಶರಿಂದ, ಸಮರ್ಥ್ ಶ್ಯಾಮನೂರು ಅವರಿಗೆ ಬೆಂಬಲ ವ್ಯಕ್ತಪಡಿಸುವ ಪ್ರಯತ್ನಗಳನ್ನು ನಡೆಸುತ್ತಿದೆ.

## ಖಖಐಅ ಪರೀಕ್ಷೆಗಳ ಅಂಕ 625 ಬದಲಿಗೆ 525ಕ್ಕೆ ಇಳಿಕೆ: ಹಿಂದಿ ಸೇರಿ ತೃತೀಯ ಭಾಷೆಗಳು ಲೆಕ್ಕಕ್ಕಿಲ್ಲ!

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: SSLC ಪರೀಕ್ಷೆಯ ಅಂಕಗಳನ್ನು 625ಕ್ಕೆ ಬದಲಿಗೆ 525 ಅಂಕಗಳಿಗೆ ಇಳಿಕೆ ಮಾಡಲಾಗಿದೆ. ಹಿಂದಿ ಸೇರಿ ತೃತೀಯ ಭಾಷೆಗಳ ಅಂಕಗಳಿಗೆ ಕೊಕ್ ನೀಡಲಾಗಿದ್ದು ಹಿಂದಿನ ವರ್ಷಗಳಂತೆ ಅವರು 100 ಅಂಕಗಳಿಗೆ ಪರೀಕ್ಷೆ ಬರೆಯಲಿದ್ದು, ಅಂಕಪಟ್ಟಿಯಲ್ಲಿ ಗ್ರೇಡ್ ಅಂತ ನಮೂದಿಸಲಾ ಗುತ್ತದೆ.**



ಬೆಂಗಳೂರಿನಲ್ಲಿದ್ದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಿಕ್ಷಣ ಸಚಿವ, ಮಧು ಬಂಗಾರಪ್ಪ, ಈ ನಿಯಮ 2026ರಲ್ಲಿ ನಡೆಯುತ್ತಿರುವ ಎಸ್ಎಸ್ಎಲ್‌ಸಿ ಪರೀಕ್ಷೆಯಿಂದಲೇ ಅನ್ವಯವಾಗಲಿದೆ ಎಂದರು. ಈ ಹಿಂದೆ 625 ಅಂಕಗಳಿಗೆ ಮಕ್ಕಳು ಪರೀಕ್ಷೆ ಬರೆಯುತ್ತಿದ್ದರು. ಆದರೆ ಈಗ ಅಂಕಪಟ್ಟಿಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆಯ 100 ಅಂಕಗಳನ್ನು ಅಂಕಪಟ್ಟಿಯಲ್ಲಿ ನಮೂದಿಸುವುದಿಲ್ಲ. 525 ಅಂಕಗಳಿಗೆ ಪ್ರತಿ ವಿದ್ಯಾರ್ಥಿಯೂ ಪಡೆದ ಅಂಕಗಳಷ್ಟೇ ಇರುತ್ತವೆ ಎಂದು ಹೇಳಿದರು.

# ದಾವಣಗೆರೆ ಉಪಚುನಾವಣೆಯಲ್ಲಿ ಮೇಜರ್ ಟ್ವಿಸ್ಟ್

ನೈಜ್ಯ ದೆಸೆ ನ್ಯೂಸ್

**ದಾವಣಗೆರೆ: ರಾಜ್ಯದ ಗಮನ ಸೆಳೆದಿರುವ ದಾವಣಗೆರೆ ಉಪಚುನಾವಣೆಯಲ್ಲಿ ಮಹತ್ವದ ರಾಜಕೀಯ ಬೆಳವಣಿಗೆ ನಡೆದಿದೆ. ಉಪಚುನಾವಣೆಗೆ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಸಾದಿಕ್ ಪೈಲ್ವಾನ್ ಅವರು ಇಂದು ತಮ್ಮ ಬೆಂಬಲಿಗರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಸುದೀರ್ಘ ಮಾತುಕತೆ ನಡೆಸಿದರು.**



ಮುಖ್ಯಮಂತ್ರಿಗಳೊಂದಿಗೆ ನಡೆದ ಚರ್ಚೆಯ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಾದಿಕ್ ಪೈಲ್ವಾನ್ ಅವರು, ಕ್ಷೇತ್ರದ ಅಭಿವೃದ್ಧಿ ಹಾಗೂ ಜನಪರ ಆಡಳಿತದ ದೃಷ್ಟಿಯಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಿದ್ಧಾರ್ಥ್ ಶಾಮನೂರು ಅವರಿಗೆ ನಿರ್ಬಂಧಿತ ಬೆಂಬಲ ನೀಡುವುದಾಗಿ ಘೋಷಿಸಿದರು. ದಾವಣಗೆರೆ ಕ್ಷೇತ್ರದ ಸಮಗ್ರ ಅಭಿವೃದ್ಧಿ, ರಸ್ತೆ, ನೀರು, ಶಿಕ್ಷಣ ಹಾಗೂ ಉದ್ಯೋಗಾವಕಾಶಗಳ ವೃದ್ಧಿಗೆ ಸ್ಥಿರ ಆಡಳಿತ ಅಗತ್ಯವಿದೆ. ಕಾಂಗ್ರೆಸ್ ಪಕ್ಷದ ಅಭಿವೃದ್ಧಿ ಪರ ಯೋಜನೆಗಳು ಜನ-ರಿಗೆ ಅನುಕೂಲವಾಗಲಿದ್ದು, ತಮ್ಮ ಬೆಂಬಲಿಗರು ಹಾಗೂ ಅಭಿಮಾನಿಗಳು ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಕರೆ ನೀಡಿದರು.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕ್ಷೇತ್ರದ ಅಭಿವೃದ್ಧಿಗೆ ಎಲ್ಲ ವರ್ಗದ ನಾಯಕರು ಒಂದಾಗಿ ಕೆಲಸ ಮಾಡುತ್ತಿರುವುದು ಸಂತೋಷಕರ ಸಂಗತಿ. ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಜನತೆ ಭಾರಿ ಬೆಂಬಲ ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಸಾದಿಕ್ ಪೈಲ್ವಾನ್ ಅವರ ಬೆಂಬಲ ಘೋಷಣೆಯಿಂದ ದಾವಣಗೆರೆ ಉಪಚುನಾವಣೆಯ ರಾಜಕೀಯ ಸಮೀಕರಣದಲ್ಲಿ ಗಮನಾರ್ಹ ಬದಲಾವಣೆ ಉಂಟಾಗಿದೆ ಎಂದು ರಾಜ-ಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ಪಕ್ಷದ ಸಂಘಟನೆಗೆ ಇದು ಹೆಚ್ಚುವರಿ ಬಲ ನೀಡುವ ಬೆಳವಣಿಗೆಯಾಗಿ ಪರಿಗಣಿಸಲಾಗಿದೆ. ಈ ಸಂದರ್ಭದಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಪೈಲ್ವಾನ್ ಬೆಂಬಲಿಗರು ಉಪಸ್ಥಿತರಿದ್ದು, ಮುಂದಿನ ಚುನಾವಣಾ ತಂತ್ರಗಳ ಕುರಿತು ಚರ್ಚೆ ನಡೆಸಿದರು. ಸುರ್ಜೀವಾಲ , ಉಪ ಮುಖ್ಯ ಮಂತ್ರಿ ಡಿ ಕೆ ಶಿವಕುಮಾರ್, ಶಾಸಕ ರಿಜ್ವಾನ್ ಅರ್ಷದ್, ಸಲೀಂ ಅಹ್ಮದ್ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

# ಸಿನಿ ಪ್ರಯಾಣದಲ್ಲಿ ಶರಣಪ್ಪರಿಗೆ ಯಶಸ್ಸು ನಿರಂತರವಾಗಿ ಇರಲಿ: ಆರ್.ಸಿದ್ದನಗೌಡ




ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ಸಂತೆಕೆಲ್ಲೂರು ಗ್ರಾಮದವರಾದ ಶರಣಪ್ಪ ಅವರು ಇದೇ ಮೊದಲ ಬಾರಿಗೆ ಅವರ ನಿರ್ದೇಶನದಲ್ಲಿ ಮೂಡಿ ಬಂದಿರುವ ಚಿತ್ರ ಯಾವ ಮೋಹನ ಮುರಳಿ ಕರೆಯಿತು ಎಂಬ ಚಿತ್ರವೂ ಯಶಸ್ವಿ ಕಾಣಲಿ, ಜತೆಗೆ ಶರಣಪ್ಪ-ರಿಗೆ ಸಿನಿ ಪ್ರಾಯಣದಲ್ಲಿ ಯಶಸ್ಸು ನಿರಂತರವಾಗಿ ಇರಲಿ ಎಂದು ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹಾಗೂ ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನಕಾರ್ಯದರ್ಶಿ ಆರ್.ಸಿದ್ದನಗೌಡ ತುರವಿಹಾಳ ಶುಭ ಹಾರೈಸಿದರು.**

ಪಟ್ಟಣದ ಶರಣಬಸವೇಶ್ವರ ಚಿತ್ರಮಂದಿರಲ್ಲಿ ಶುಕ್ರವಾರ ಚಿತ್ರವನ್ನು ವೀಕ್ಷಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ರ ಯಾವ ಮೋಹನ ಮುರಳಿ ಕರೆಯಿತು ಎಂಬ ಚಿತ್ರವೂ ಒಂದು ಭಾವನಾತ್ಮಕ ಕಥೆಯ ಜೆತೆಗೆ ಸಸ್ಪೆನ್ಸ್ ಸ್ಟೋ-ರಿಯೂ ಚಿತ್ರದಲ್ಲಿದೆ. ಶ್ವಾನ ಮತ್ತು ಬಾಲಕಿಂ-ಯ ನಡುವಿನ ಮಧುರ ಬಾಂಧವ್ಯ ಚಿತ್ರದ ಉದ್ದಕ್ಕೂ ಸಾಗಲಿದ್ದು, ರಾಣಾ ಹಾಗೂ ರಾಕಿ ಎಂಬ ಶ್ವಾನ ಚಿತ್ರದ ಕೇಂದ್ರ ಬಿಂದುವಾಗಿದೆ. ಈ ಸಿನೆಮಾದಲ್ಲಿ ಒಂದು ಸುಂದರ ಕಥೆ ಇದೆ. ಅದು ಎಮೋಷನಲ್ ಆಗಿ ಮನಸ್ಸನ್ನು ಸೆಳೆಯುತ್ತದೆ.

ಈ ಸಿನೆಮಾ ಪ್ರಾಣಿ ಪ್ರಿಯ-ರಿಗೆ ಬೇಗ ಇಷ್ಟವಾಗುತ್ತದೆ. ಇದೊಂದು ಕುಟುಂಬ ಸಮೇತರಾಗಿ ನೋಡುವಂತಹ ಚಿತ್ರ. ಈ ಸಿನೆಮಾದಲ್ಲಿ ಎಲ್ಲ ನಟರು ಅದ್ಭುತ ಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ. ಎಲ್ಲಾರಿಗೂ ಅಭಿನಂದನೆಗಳು. ಶರಣಪ್ಪ ಅವರು ಮುಂದಿನ ದಿನಗಳಲ್ಲಿ ಇನ್ನೂ ಅದ್ಭುತ ಸಿನೆಮಾಗಳನ್ನು ನೀಡಲಿ. ಸಾಮಾಜಿಕ ಏಕತೆ ಮತ್ತು ಹೆಚ್ಚು ಸಮಾನತೆಯುಳ್ಳ ಸಿನಿಮಾಗಳನ್ನು ನಿರ್ಮಿಸುವತ್ತ ಅವರ ಪ್ರಯಾಣದಲ್ಲಿ ಯಶಸ್ಸು ನಿರಂತರವಾಗಿ ಇರಲಿ ಅಂತ ಹಾರೈಸುತ್ತೇನೆ ಅಂತ ತಿಳಿಸಿದರು.

ಈ ಸಂದರ್ಭದಲ್ಲಿ ಯಾವ ಮೋಹನ ಮುರಳಿ ಕರೆಯಿತು ಚಿತ್ರ ಅಂಡದೊಂದಿಗೆ , ಅಂದಾನಪ್ಪ ಗುಂಡಳ್ಳಿ, ಹೆಚ್.ಬಿ.ಮುರಾರಿ, ಹನುಮಂತಪ್ಪ ಮುದ್ದಾಪೂರು, ಮೈಬುಸಾಬ ಮುದ್ದಾಪೂರು, ಬಾಲಸ್ವಾಮಿ ಜಿನ್ನಾಪೂರ, ಅಶೋಕ ಮುರಾರಿ, ವಿಜಯಕುಮಾರ ಹೂವಿನಭಾವಿ, ಪೌಲರಾಜ ಯದ್ದಲದಿನ್ನಿ, ಮರಿಸ್ವಾಮಿ ಬೆನಕನಾಳ, ಸೇ-ರಿದಂತೆ ಇನ್ನಿತರೆ ಸಿನೆಮಾಭಿಮಾನಿಗಳಿದ್ದರು.

# ಉತ್ತರ ಕರ್ನಾಟಕ ಸ್ನೇಹ ಲೋಕ ಟ್ರಸ್ಟ್ ವತಿಯಿಂದ ಕುಡಿಯುವ ನೀರಿನ ಸ್ಟೀಲ್ ಟ್ಯಾಂಕ್ ದೇಣಿಗೆ

ನೈಜ್ಯ ದೆಸೆ ನ್ಯೂಸ್

**ಅರಕೇರಾ: ತಾಲೂಕಿನ ಬಿ.ಗಣೇಕಲ್ ಗ್ರಾಮದ ಶ್ರೀ ವಿದ್ಯಾಭಾರತಿ ಹಿರಿಯ ಪ್ರಾಥಮಿಕ ಶಾಲೆಗೆ ಉತ್ತರ ಕರ್ನಾಟಕ ಸ್ನೇಹ ಲೋಕ ಟ್ರಸ್ಟ್ (ರಿ) ಬೆಂಗಳೂರು ವತಿಯಿಂದ 200 ಲೀಟರ್ ಸಾಮರ್ಥ್ಯವುಳ್ಳ ಕುಡಿಯುವ ನೀರಿನ ಸ್ಟೀಲ್ ಟ್ಯಾಂಕನ್ನು ಶಾಲೆಗೆ ದೇಣಿಗೆ ನೀಡಿದರು.**



ಯುಕೆಎಸ್ ಎಲ್ ಟ್ರಸ್ಟ್ ನ ಕಾರ್ಯದರ್ಶಿಯಾದ ಪ್ರಕಾಶ ರಾಜಗೋಳಿ ರವರು ಇಂತಹ ಹಿಂದುಳಿದ ಪ್ರದೇಶದಲ್ಲಿ 20 ವರ್ಷಗಳಿಂದ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವುದು ಮಹತ್ವದ ಕಾರ್ಯವಾಗಿದ್ದು ಗ್ರಾಮೀಣ ಭಾಗದಲ್ಲಿ ಶಿಕ್ಷಣ ನೀಡುವುದು ಬಹಳ ಕಷ್ಟಕರ ಆದರೆ ಒಬ್ಬ ರೈತ ಅನಕ್ಷರಸ್ಥರಾದ ಹಂಪಣ್ಣ ಪಲ್ಲೇದ್ ಅವರು ತಮ್ಮ ಜೀವನವನ್ನು ಶಿಕ್ಷಣಕ್ಕಾಗಿ ಮುಡಿಪು ಇಟ್ಟಿದ್ದು ಶ್ಲಾಘನೀಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು.

ಯುಕೆಎಸ್ಎಲ್ ಟ್ರಸ್ಟಿಗಳಾದ ದೀಪಕ್ ಆಲೂರ್ ರವರು ಮಕ್ಕಳಿಗೆ ನೋಟ್ ಬುಕ್ ಗಳು, ಪೆನ್ನು, ಪೆನ್ಸಿಲ್ ಗಳು ಹಾಗೂ ಸುಮಾರು ಹತ್ತು ಪುರಾಣ ಪುಸ್ತಕಗಳನ್ನು ತಮ್ಮ ವೈಯಕ್ತಿಕವಾಗಿ



ಶಾಲೆಗೆ ಕೊಡುಗೆಯನ್ನು ನೀಡಿದರು ನಂತರ ಶಾಲೆಯ ಅಧ್ಯಕ್ಷರಾದ ಹಂಪಣ್ಣ ಪಲ್ಲೇದ್ ರವರು ಹರ್ಷ ವ್ಯಕ್ತಪಡಿಸಿದ. ಈ ಸಂದರ್ಭದಲ್ಲಿ ಯುಕೆಎಸ್ಎಲ್ ಟ್ರಸ್ಟ್ ನ ಪಧಾಧಿಕಾರಿಗಳಾದ ಮಹಾಂತೇಶ ವೀರಾಪುರ, ಸಂಜೀವ್ ಪಟ್ವಾರಿ, ಶರಣು ಪಲ್ಲೇದ್, ಸ್ಥಳೀಯರಾದ ಅಯ್ಯಣ್ಣ ಕಟ್ಟಿಮನಿ, ಎಚ್. ಎಸ್.ನಾಯಕ ಮುಂತಾದವರು ಇದ್ದರು.

# ಇಪ್ಪತ್ತೊಂದು ಪಲ್ಲಕ್ಕಿಗಳ ಮೆರವಣಿಗೆ.




ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬೆಕಿನಾಳ ಗ್ರಾಮದ ಶ್ರೀ ಪವಾಡ ಮಹಾಪುರುಷ ದೊಡ್ಡಪ್ಪ ಮುತ್ತ್ಯಾರವರ ಜಾತ್ರಾಮಹೋತ್ಸವದ ಮಾರ್ಚ್ 24 ಮಂಗಳವಾರದಂದು ಇಪ್ಪತ್ತೊಂದು ಪಲ್ಲಕ್ಕಿ ಮೆರವಣಿಗೆ ಉತ್ಸವ ಕಾರ್ಯಕ್ರಮವನ್ನು ಅದ್ದೂರಿಯಾಗಿ ಜರಗಿತು ಮುಂಜಾನೆ 10 ಗಂಟೆಗೆ ಇಪ್ಪತ್ತೊಂದು ಪಲ್ಲಕ್ಕಿಗಳನ್ನು ಗಂಗಸ್ಥಳ ಮಾಡಿಕೊಂಡು ಗ್ರಾಮದ ಪ್ರಮುಖ ಬೀದಿಯಲ್ಲಿ ಡೊಳ್ಳು ವಾಲಗದೊಂದಿಗೆ ಮೆರವಣಿಗೆಯ ಮುಖಾಂತರ ದೇವಸ್ಥಾನಕ್ಕೆ ಬರಮಾಡಿಕೊಂಡು ಪ್ರಕಾಶ್ ಮುತ್ತ್ಯಾರ್ ಮುಂಗಾರು - ಹಿಂಗಾರು ಮಳೆ ಬೆಳೆ ಸಮೃದ್ಧ ಬಗ್ಗೆ ನುಡಿಗಳು ಹೇಳಿದರು.**

ಮಂಗಳವಾರದಂದು ಹಗಲು ಶ್ರೀ ಕರಿಸಿದ್ದೇಶ್ವರ್ ಕಲಾ ಸಂಘ ಬೇಕಿನಾಳ್ ಹಾಗೂ ಅಮೋಘಸಿದ್ದೇಶ್ವರ್ ಡೊಳ್ಳಿನ ಸಂಘ ಕೆಸರಟ್ಟಿ ಸುಪ್ರಸಿದ್ಧ ಜಿದ್ದಾಜಿದ್ದಿನ ಡೊಳ್ಳಿನ ಪದಗಳು ಜರಗಿದು ಅಂದೆ ರಾತ್ರಿ 10 ಗಂಟೆಗೆ ಶ್ರೀ ಗುಡ್ಡಾಪುರ ದಾನಮ್ಮ ದೇವಿಯ ಮಹಾತ್ಮೆ ಎಂಬ ಸುಂದರ ಪೌರಾಣಿಕ ನಾಟಕ ಜರಗಿತ್ತು ಹಾಗೂ ಆರು ಜೋಡಿ ಸಮೂವಿಕ ಮದುವೆ ಕಾರ್ಯಕ್ರಮ ಜರಗಿದು, ಕಕ್ಕೇರಾ ಡೊಳ್ಳು ಕುಣಿತ ಕಲಾ ತಂಡದವರು ಭಾಗವಹಿಸಿದರು.

ಶಿವಣ್ಣ ಪೂಜಾರ್ ಅಂಬಳನೂರ್ ಅಗ್ನಿ ಅಮಲಿಹಾಳ್ ಅಲಗೂರ್ ಬೂದಿಹಾಳ್ ಕಲಕೇರಿ ಅಲುವ್ ಗ್ರಾಮದ ಪೂಜಾರಿಗಳು ಹಾಗೂ ಗ್ರಾಮದ ಹಿರಿಯರಾದ ಶರಣಪ್ಪ ಪೂಜಾರ್ ಭೀಮಣ್ಣ ಪೂಜಾರ್ ಬಸವರಾಜ್ ಸತಲಗಾವಿ ಶಿವಪುತ್ರ ದೇವಸ್ಥಾನದ ಪಟ್ಟದ ಪೂಜಾರಿಯಾದ ಶ್ರೀ ಪ್ರಕಶಮುತ್ತ್ಯಾ ಅವರು ನೇತೃತ್ವ ವಹಿಸಿದರು.

# ಸಿಂಧನೂರಿನಲ್ಲಿ ಶ್ರೀರಾಮ ನವಮಿ ಪ್ರಯುಕ್ತ ರಥೋತ್ಸವ ಅದ್ದೂರಿ ಆಚರಣೆ.

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಬ್ರಾಹ್ಮಣ-ರ ಓಣಿಯಲ್ಲಿರುವ ಪ್ರಸಿದ್ಧ ಹಾಗೂ ಪುರಾತನ ಶ್ರೀರಾಮ ಮಂದಿರದಲ್ಲಿ ಛತ್ರಪತಿ ಶಿವಾಜಿ ಮಹಾರಾಜ ಸೇವಾ ಟ್ರಸ್ಟ್ ನಿಂದ ಶ್ರೀರಾಮ ನವಮಿ ಪ್ರಯುಕ್ತ ಶುಕ್ರವಾರದಂದು ಶ್ರೀರಾಮ ದೇವರ ರಥೋತ್ಸವವು ಅದ್ದೂರಿಯಾಗಿ ಜರುಗಿತು. ರಥೋತ್ಸವಕ್ಕೆ ಶಾಸಕರಾದ ಹಂಪನಗೌಡ ಬಾದರ್ಲಿ ಚಾಲನೆ ನೀಡಿದರು.**




ಬೆಳಿಗ್ಗೆ 5 ಗಂಟೆಯಿಂದ ಧಾರ್ಮಿಕ ಕಾರ್ಯಕ್ರಮಗಳು ಪ್ರಾರಂಭವಾದವು. ತುಳಸಿ ಅರ್ಚನೆ, ಶ್ರೀಸೀತಾರಾಮ ಕಲ್ಯಾಣೋತ್ಸವ, ರಥೋತ್ಸವ, ಸೇವಾಕರ್ತರಿಗೆ ಸನ್ಮಾನ, ಪ್ರವಚನ, ಶ್ರೀರಾಮನ ಮಹಿಮೆ ನಾಟಕ ಪ್ರದರ್ಶನ ನಡೆದವು. ಶ್ರೀರಾಮ ದೇವರ ಉತ್ಸವ ಮೂರ್ತಿಯ ರಥೋತ್ಸವಕ್ಕೆ ಶಾಸಕ ಹಂಪನಗೌಡ ಬಾದರ್ಲಿ ಚಾಲನೆ ನೀಡಿದರು. ನಂತರ ರಥೋತ್ಸವವು ಬ್ರಾಹ್ಮಣ ಬೀದಿಯಲ್ಲಿ ಮಹಿಳೆಯರ ಕೋಲಾಟ, ಪುರುಷರ ಭಜನೆ, ಮಕ್ಕಳ ನೃತ್ಯ, ಭಕ್ತಾದಿಗಳು ಹಣ್ಣು, ಹೂ-ಕಾಯಿ, ಪಾನಕ, ಕೋಸಂಬ-ರಿಯನ್ನು ಶ್ರೀರಾಮ ದೇವರಿಗೆ ಸಮರ್ಪಿಸಿ, ನಂತರ ಸಕಲ ಭಕ್ತಾದಿಗಳಿಗೆ ನೀಡಿದರು.

ಈ ಸಂದರ್ಭದಲ್ಲಿ: ರಾಮಕೃಷ್ಣಾಚಾರ್ ಗೋನವಾರ, ನರಸಿಂಹಾಚಾರ್ ಮಠಾಧಿಕಾರ್, ಗೋವಿಂದರಾವ್ ಕುಲಕರ್ಣಿ, ಎಂ.ಕೆ. ಗೌರಕರ್, ಸುಬ್ಬಾಶಾಸ್ತ್ರೀ, ವೆಂಕಟೇಶಚಾರ್ ಕೆಂಗಲ್, ಹನುಮೇಶಾಚಾರ್ ಬಾದರ್ಲಿ, ನಾಗೇಂದ್ರ ಸಾಹುಕಾರ, ವೆಂಕಟೇಶ, ಬಸವರಾಜ ನಾಡಗೌಡ್ರು, ರಾಜು ಬಂಡಿ ವಕೀಲ್, ಮತ್ತು ಅಪಾರ ಭಕ್ತ ಸಮೂಹ ಪಾಲ್ಗೊಂಡಿದ್ದರು. ನಗರದ ಛತ್ರಪತಿ ಶಿವಾಜಿ ಮಹಾರಾಜ ಸೇವಾ ಟ್ರಸ್ಟ್ ವತಿಯಿಂದ ನಗರದ ಗುರುಪ್ರಸಾದ ಹೊಟೇಲ್ ಹತ್ತಿರ ಶ್ರೀರಾಮ ನವಮಿಯ ನಿಮಿತ್ಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿ-ತ್ತು ಕಾರ್ಯಕ್ರಮಕ್ಕೆ ಬಂಗಾರಿ ಕ್ಯಾಂಪಿನ ಸದಾನಂದ ಶರಣರು ಚಾಲನೆ ನೀಡಿ ರಾಮನ ಗುಣಗಳನ್ನು ಪ್ರತಿಯೊಬ್ಬರು ಕೂಡ ಅಳವಡಿಸಿಕೊಳ್ಳಲು ಕರೆ ನೀಡಿದರು. ಈ ಕಾಯಕ್ರಮದಲ್ಲಿ ಶ್ರೀರಾಮ ಭಕ್ತ-ರಿಗೆ ಪಾನಕ, ಮಜ್ಜಿಗೆ, ಲಘು ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಇದೇ ವೇಳೆ: ಬಿಜೆಪಿ ಮುಖಂಡ ಕೆ.ಕರಿಯಪ್ಪ ಹಾಗೂ ಟ್ರಸ್ಟ್ ಮುಖ್ಯಸ್ಥ ವಿಶ್ವನಾಥ ಚೌಧರಿ ಮತ್ತು ಅಮರಯ್ಯಸ್ವಾಮಿ ಅಲಬನೂರು, ಸುರೇಶ ನಕ್ಕಂಟಿ, ಅಜಯ ದಾಸರಿ, ಗುರುಸ್ವಾಮಿ ಸೇ-ರಿದಂತೆ ಅನೇಕ ಭಕ್ತಾದಿಗಳು ಪಾಲ್ಗೊಂಡಿದ್ದರು.


## ನೇಮಕಾತಿ ಪ್ರಕಟಣೆ

ಆರ್‌ಡಿಪಿಆರ್ ಕರ್ನಾಟಕ ನೇಮಕಾತಿ 2026–ವಿವಿಧ ಓಂಬುಡ್ಸ್‌ಮನ್ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆರ್‌ಡಿಪಿಆರ್ ಕರ್ನಾಟಕ ನೇಮಕಾತಿ 2026: ವಿವಿಧ ಓಂಬುಡ್ಸ್‌ಮನ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾರ್ಚ್ 2026 ರ ಆರ್‌ಡಿಪಿಆರ್ ಕರ್ನಾಟಕ ಅಧಿಕೃತ ಅಧಿಸೂಚನೆಯ ಮೂಲಕ ಓಂಬುಡ್ಸ್‌ಮನ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 24–ಏಪ್ರಿಲ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 25–03–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 24–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: rdpr.karnataka.gov.in

## ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್, ಡೀಸೆಲ್‌ಗೆ ಯಾವುದೇ ಕೊರತೆಯಿಲ್ಲ: ನಿತೀಶ್ ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡಿಸೆಲ್ ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ. ರಾಯಚೂರು ಜಿಲ್ಲೆಯಲ್ಲಿ ಕಳೆದೆರಡು ದಿನಗಳಿಂದ ಪೆಟ್ರೋಲ್ ಪಂಪ್‌ಗಳಲ್ಲಿ ಅಸಾಮಾನ್ಯ ಜನದಟ್ಟಣೆ ಕಂಡುಬಂದಿದ್ದು, ನಾಗರಿಕರು ಪೆಟ್ರೋಲ್ ಹಾಗೂ ಡೀಸೆಲ್ ಖರೀದಿಯಲ್ಲಿ ಆತಂಕಗೊಂಡಿದ್ದಾರೆ.**



ಈ ನಿಟ್ಟಿನಲ್ಲಿ ಜಿಲ್ಲಾಡಳಿತವು ರಾಯಚೂ–ರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರೀಯ ತೈಲ ಕಂಪನಿಗಳ ಅಧಿಕಾ–ರಿಗಳೊಂದಿಗೆ ಸಭೆ ನಡೆಸಿದ್ದು, ಅವರ ಮಾಹಿತಿಯ ಆದ–ಾರದ ಮೇಲೆ ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಯಾವುದೇ ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನಾಗರಿಕರು ಭಯಭೀತಿಯಿಂದ ಖರೀದಿಯಲ್ಲಿ ತೊಡಗಬೇಡಿ ಎಂದು ವಿನಂತಿಸಲಾಗಿದೆ. ಏಕೆಂದರೆ ಅಂತಹ ಕ್ರಮಗಳು ಅನಗತ್ಯ ಅನಾನುಕೂಲತೆ ಉಂಟುಮಾಡಬಹುದು ಮತ್ತು ಸಾಮಾನ್ಯ ಪೂರೈಕೆ ಕಾರ್ಯ ವಿಧಾನಗಳನ್ನು ಅಡ್ಡಿಪಡಿಸಬಹುದು. ಮುಂದುವರೆದು ಪೆಟ್ರೋಲಿಯಂ ಕಾಯ್ದೆ 1934 ಮತ್ತು ಪೆಟ್ರೋಲಿಯಂ ನಿಯಮಗಳು, 2002 ಕ್ಲಾಜ್(5) ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಪೆಟ್ರೋಲ್ ಮಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಇದರಿಂದ ಗಂಭೀರ ಸುರಕ್ಷತಾ ಅಪಘಾತಗಳನ್ನುಂಟು ಮಾಡುತ್ತದೆ. ರಾಯಚೂರು ಜಿಲ್ಲೆಯ ಎಲ್ಲಾ ಪೆಟ್ರೋಲ್ ಪಂಪ್ ಮಾಲೀಕರಿಗೆ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ, ಕ್ಯಾನ್, ಬ್ಯಾರಲ್‌ಗಳಲ್ಲಿ ಪೆಟ್ರೋಲ್ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಯಾವುದೇ ರೀತಿಯ ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಪೆಟ್ರೋಲ್ ಪಂಪ್‌ಗಳಲ್ಲಿ ಶಿಸ್ತು ಮತ್ತು ಸೌಹಾರ್ದಯುತ ನಡವಳಿಕೆಯನ್ನು ಕಾಪಾಡಿಕೊಳ್ಳಲು ಮತ್ತು ಪಂಪ್ ಸಿಬ್ಬಂದಿ ಹಾಗೂ ಸಹ ನಾಗರಿಕರೊಂದಿಗೆ ಮತ್ತು ಅಗತ್ಯ ಸೇವೆಗಳ ಸುಗಮ ಕಾರ್ಯನಿರ್ವಹಣೆಯಲ್ಲಿ ಎಲ್ಲಾ ಸಾರ್ವಜನಿಕರ ಸಹಕಾರವನ್ನು ಕೋರಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಮಹಾವೀರ ಜಯಂತಿ ಸಾರ್ವತ್ರಿಕ ರಜೆ ದಿನಾಂಕ ಬದಲಾವಣೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನ 17 2025 ರಂದು ಪ್ರಕಟಿಸಿರುವ 2026ನೇ ಸಾಲಿನ ಸಾರ್ವತ್ರಿಕ ರಜಾ ದಿನಗಳ ಪಟ್ಟಿಗೆ ಸಂಬಂಧಿಸಿದ ಅಧಿಸೂಚನೆ ಸಂಖ್ಯೆ 1 ಹಾಗೂ 11ರ ಕೋಷ್ಟಕದ ಕ್ರಮ ಸಂಖ್ಯೆ (5)ರಲ್ಲಿ ಮಹಾವೀರ ಜಯಂತಿ ಪ್ರಯುಕ್ತ ಘೋಷಿಸಲಾಗಿದ್ದ ಸಾರ್ವತ್ರಿಕ ರಜಾ ದಿನವನ್ನು ದಿನಾಂಕ: ಮಾ 31 2026 ನಡೆಯುತ್ತಿದೆ.**

(ಮಂಗಳವಾರ) ಬದಲಾಗಿ ಮಾ 30 (ಸೋಮವಾರ) ಎಂದು ಮಾರ್ಪಡಿಸಿ ಆದೇಶಿಸಲಾಗಿದೆ. ಸದರಿ ರಜೆಯನ್ನು ನೆಗೋಷಿಯಬಲ್ ಇನ್‌ಸ್ಟ್ರುಮೆಂಟ್ಸ್ ಅಧಿನಿಯಮ,1881(1881ರ ಅಧಿನಿಯಮ ಸಂಖ್ಯೆ 26)ರ ಅನ್ವಯವೂ ಘೋಷಿಸಲಾಗಿದೆ. ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಹಾಗೂ ಅವರ ಹೆಸರಿನಲ್ಲಿ ಈ ಆದೇಶ ಹೊರಡಿಸಲಾಗಿದೆ.

# ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಅಪಾರ ಸಚಿವ ಎನ್.ಎಸ್. ಬೋಸರಾಜು ಜನಪರ ಆಡಳಿತಕ್ಕಾಗಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡಿ ಎಂದು ಮನವಿ

ನೈಜ್ಯ ದೆಸೆ ನ್ಯೂಸ್

**ಕೇರಳ: ಕೇರಳ ವಿಧಾನಸಭಾ ಚುನಾವಣೆಯ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಅವರು ಕೇರಳದ ಕಣ್ಣೂರು ಜಿಲ್ಲೆಯ ಕಣ್ಣೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಟಿ ಓ ಮೋಹನ್ ಅವರ ಪರ ಉತ್ಸಾಹಭರಿತ ಚುನಾವಣಾ ಪ್ರಚಾರ ನಡೆಸಿದರು.**

ಪ್ರಚಾರ ಸಭೆಯಲ್ಲಿ ಮಾತನಾಡಿದ ಸಚಿವರು, ಸ್ವಾತಂತ್ರ್ಯೋತ್ತರ ಭಾರತದ ನಿರ್ಮಾಣದಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ಶಿಕ್ಷಣ, ಆರೋಗ್ಯ, ಕೈಗಾರಿಕೆ, ಕೃಷಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರಗಳು ನೀಡಿರುವ ಕೊಡುಗೆಗಳು ದೇಶದ ಪ್ರಗತಿಗೆ ಬಲವಾದ ಅಡಿಪಾಯವಾಗಿವೆ ಎಂದು ಅವರು ತಿಳಿಸಿದರು.



ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರಗಳು ಸದಾ ಬದ್ಧವಾಗಿವೆ.

ಬಡವರು, ರೈತರು, ಮಹಿಳೆಯರು, ಕಾರ್ಮಿಕರು ಹಾಗೂ ಯುವಕರ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷ ವಿವಿಧ ಕಲ್ಯಾಣ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಹೇಳಿದರು. ಕರ್ನಾಟಕ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ಕಾಂಗ್ರೆಸ್ ಸರ್ಕಾರಗಳು ಜನತೆಗೆ ನೀಡಿದ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ ಜನರ ವಿಶ್ವಾಸ ಗಳಿಸಿವೆ. ನುಡಿದಂತೆ ನಡೆದು ಜನಪರ ಆಡಳಿತ ನೀಡುವ ರಾಜಕೀಯ ಶಕ್ತಿ ಕಾಂಗ್ರೆಸ್ ಮಾತ್ರವಾಗಿದ್ದು, ಕೇರಳದಲ್ಲಿಯೂ ಅದೇ ರೀತಿಯ ಅಭಿವೃದ್ಧಿ ತರಲು ಕಾಂಗ್ರೆಸ್ ಅಭ್ಯರ್ಥಿಯನ್ನು ಭರ್ಜರಿ ಬಹುಮತದಿಂದ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಪ್ರಚಾರ ಮೆರವಣಿಗೆಯ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಉತ್ಸಾಹ ವ್ಯಕ್ತಪಡಿಸಿದರು. ಯುವಕರು, ಮಹಿಳಾ ಘಟಕದ ಸದಸ್ಯರು ಹಾಗೂ ಸ್ಥಳೀಯ ನಿವಾಸಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಚುನಾವಣಾ ವಾತಾವರಣ–ಕ್ಕೆ ಮತ್ತಷ್ಟು ಚೈತನ್ಯ ತುಂಬಿದರು.



ನಂತರ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದ ಸಚಿವರು, ಸ್ಥಳೀಯ ನಾಯಕರು ಮತ್ತು ಚುನಾವಣಾ ಸಂಚಾಲಕರೊಂದಿಗೆ ಸಭೆ ನಡೆಸಿ ಮತದಾರ ಸಂಪರ್ಕ ಕಾರ್ಯಕ್ರಮಗಳು,

ಬೂತ್ ಮಟ್ಟದ ಸಂಘಟನೆ ಬಲವರ್ಧನೆ ಹಾಗೂ ಅಂತಿಮ ಹಂತದ ಚುನಾವಣಾ ತಂತ್ರಗಾ–ರಿಕೆ ಕುರಿತು ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಮಾರ್ಟಿನ್ ಜಾರ್ಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮಾಜಿ ಶಾಸಕ ವೇಣುಗೋಪಾಲ್, ಪಕ್ಷದ ಹಿರಿಯ ಮುಖಂಡರು, ಯುವ ಘಟಕದ ನಾಯಕರು ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಸ್ಕಿ: ಶಾಶ್ವತ ನ್ಯಾಯಲಯ ಮಂಜೂರಿಗೆ ವಕೀಲರ ಸಂಘದಿಂದ ಒತ್ತಾಯ




ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದಲ್ಲಿರುವ ಜೆಎಂಎಫ್‌ಸಿ ಸಂಚಾರಿ ನ್ಯಾಯಲಯದಲ್ಲಿ ವಾರದಲ್ಲಿ 2 ದಿನ ಮಾತ್ರ ಕಾರ್ಯ ಕಲಾಪಗಳು ನಡೆಯುತ್ತಿರುವುದರಿಂದ ಕಕ್ಷಿದಾರರಿಗೆ ಸಮಸ್ಯೆಯಾಗುತ್ತಿರುವದರಿಂದ ಶಾಶ್ವತ ನ್ಯಾಯಲಯ ಮಂಜೂರಿಗೆ ವಕೀಲರ ಸಂಘದಿಂದ ಸರಕಾರಕ್ಕೆ ಒತ್ತಾಯಿಸಿದರು.**

ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ವಕೀಲರ

**ಮಸ್ಕಿ ಪಟ್ಟಣಕ್ಕೆ ಉಪ ನೋದಣಿ ಕಛೇರಿಯೂ ಅವಶ್ಯಕತೆಯಿದ್ದು, ಕೂಡಲೇ ಶಾಸಕ ಆರ್.ಬಸನಗೌಡ ತುರ್ವಿಹಾಳ ಅವರು ಪಟ್ಟಣಕ್ಕೆ ಉಪ ನೋಂದಣಿ ಕಛೇ–ರಿಯನ್ನು ಮಂಜೂರು ಮಾಡಿಸಬೇಕೆಂದು ಒತ್ತಾಯಿಸಿದರು.**

ಸಂಘದ ಅಧ್ಯಕ್ಷ ಹೆಚ್. ವೀರಭದ್ರಪ್ಪ ಮಾತನಾಡಿ ಸಂಚಾರಿ ನ್ಯಾಯಲಯವಾಗಿ ಗುರುವಾರ ಮತ್ತು ಶುಕ್ರವಾರ ಮಾತ್ರ ಕಾರ್ಯನಿರ್ವಾಹಿಸುತ್ತಿದೆ. ಪ್ರತಿ ವಾರ ಎರಡೂ ದಿನವೂ ದಿನವೊಂದಕ್ಕೆ 280 ರಿಂದ 300 ಪ್ರಕರಣಗಳು ವಿಚಾರಣೆ ನಡೆಯುತ್ತಿರುವುದರಿಂದ ಪ್ರಕರಣಗಳು ಶೀಘ್ರ ವಿಲೇವಾರಿಯಾಗದೇ ಸುಮಾರು ಈಗಾಗಲೇ 2800 ಪ್ರಕರಣಗಳು ಬಾಕಿ ಉಳಿದುಕೊಂಡಿದ್ದರಿಂದ ಸ್ಥಳೀಯ ಶಾಸಕರು ಶಾಶ್ವತ ನ್ಯಾಯಲಯ ಮಂಜೂರು ಮಾಡಿಸಲು ವಿಶೇಷ ಮುತುವರ್ಜಿವಹಿಸಬೇಕೆಂದರು. ಮಸ್ಕಿಗೆ ಶಾಶ್ವತ ನ್ಯಾಯಲಯದ ಫೈಲ್ ಈಗಾಗಲೇ ಹಣಕಾಸು ಇಲಾಖೆಯಲ್ಲಿದ್ದು,

ಈ ಬಗ್ಗೆ ಶಾಸಕರು ವಕೀಲರ ಸಂಘದ ನಿಯೋಗವನ್ನು ಮತ್ತೊಮ್ಮೆ ಕರೆದುಕೊಂಡು ಹೋಗಿ ಕಾನೂನು ಮಂತ್ರಿಗಳ ಮತ್ತು ಸರ್ಕಾರ ಮೇಲೆ ಒತ್ತಡ ಹೇರಬೇಕೆಂದು ಈ ಮೂಲಕ ಒತ್ತಾಯಿಸಿದರು. ಈ ಸಂದರ್ಭದಲ್ಲಿ ವಕೀಲರಾದ ಅಮರೇಗೌಡ, ರಾಮಣ್ಣ ಬಳಗಾನೂರು, ಮಲ್ಲಪ್ಪ ನಾಗರಬೆಂಚಿ, ರಾಮಣ್ಣ ನಾಯಕ ದೀನಸಮುದ್ರ, ಪಂಪನಗೌಡ ಗುಡದೂರು, ಬಸವರಾಜ ಯತ್ನಟ್ಟಿ, ನಭೀರಸೂಲ್ ಶೇಡ್ಮಿ, ಚನ್ನಪ್ಪ ನಾಗಲದಿನ್ನಿ ಇದ್ದರು.

# ಬೇಸಿಗೆಯಲ್ಲಿ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮಕ್ಕೆ ಸೂಚನೆ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಬೇಸಿಗೆ ದಿನಗಳಲ್ಲಿ ಸಾರ್ವಜನಿಕ–ರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು' ಎಂದು ತಹಶೀಲ್ದಾರ್ ಮಂಜುನಾಥ ಭೋಗಾವತಿ ಮತ್ತು ತಾಲ್ಲೂಕು ಪಂಚಾಯಿತಿ ಇಒ ಅಮರೇಶ ಯಾದವ್ ಅಧಿಕಾರಿಗಳಿಗೆ ಸೂಚಿಸಿದರು.**

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕುಡಿಯುವ ನೀರಿನ ಟಾಸ್ಕ್ ಫೋರ್ಸ್ ಸಭೆಯಲ್ಲಿ ಮಾತನಾಡಿದ ಎಡದಂಡೆ ಸಮಿತಿ ಅವರು, ತುಂಗಭದ್ರಾ ಕಾಲುವೆಗೆ ನೀರು ಹರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕಾಲುವೆ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳು,



ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳು ತಮ್ಮ ವ್ಯಾಪ್ತಿಯ ಕುಡಿಯುವ ನೀರಿನ ಕೆರೆಗಳನ್ನು ತಕ್ಷಣ ಭರ್ತಿ ಮಾಡಿಕೊಳ್ಳಬೇಕು' ಎಂದು ನಿರ್ದೇಶನ ನೀಡಿದರು. ಬೇಸಿಗೆ ಸಂದರ್ಭದಲ್ಲಿ ಯಾವುದೇ ಗ್ರಾಮದಲ್ಲೂ ಕುಡಿಯುವ ನೀರಿನ ಕೊರತೆ ಉಂಟಾದಂತೆ ಮುಂಚಿತವಾಗಿ ಕ್ರಮ ಕೈಗೊಳ್ಳಬೇಕು.

ನಾಲೆಗೆ ನೀರು ಹರಿಸಿದಾಗ ಆಯಾ ಗ್ರಾ.ಪಂ ವ್ಯಾಪ್ತಿಯ ಅಧಿಕಾರಿಗಳು ಕೆರೆಗಳನ್ನು ಭರ್ತಿ ಮಾಡುವುದಕ್ಕೆ ಆದ್ಯತೆ ನೀಡಬೇಕು ತಹಶೀಲ್ದಾರ್ ಮಂಜುನಾಥ ಭೋಗಾವತಿ ಹೇಳಿದರು. ಈಗಾಗಲೇ ಬೇಸಿಗೆ ಆರಂಭವಾಗಿದ್ದರೆ ಕೆಲ ಹಳ್ಳಿಗಳಲ್ಲಿ ನೀರಿನ ಸಮಸ್ಯೆಯನ್ನು ಸಾರ್ವಜನಿಕರು ಎದುರಿಸುತ್ತಿದ್ದಾರೆಂಬ ದೂರುಗಳು ಕೇಳಿ ಬಂದಿವೆ. ಕೂಡಲೇ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ನೀರು ಪೂರೈಕೆ ಮಾಡಲು ಕ್ರಮ ಕೈಗೊಳ್ಳಬೇಕು.

ತಾಲೂಕಿನ ವಿವಿಧ ಗ್ರಾ.ಪಂ ವ್ಯಾಪ್ತಿಯಲ್ಲಿರುವ ಒಟ್ಟು 24 ಕೆರೆಗಳನ್ನು ಭರ್ತಿ ಮಾಡುವ ಮೂಲಕ ನೀರಿನ ಲಭ್ಯತೆ ಹೆಚ್ಚಿಸಬೇಕು ಎಂದರು. ಅಗತ್ಯವಿದ್ದಲ್ಲಿ ಹೆಚ್ಚುವರಿ ಕೊಳವೆಬಾವಿಗಳನ್ನು ಕೊರೆಸಲು, ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಸ್ಥಳಕ್ಕೆ ತೆರಳಿ ಪರಿಶೀಲಿಸಿ ಸಿದ್ಧಪಡಿಸಿಕೊಳ್ಳಬೇಕು' ಎಂದರು. ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ನರಸರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಳಗಾನೂರು ಪಟ್ಟಣಕ್ಕೆ ಮಾ.29 ರಂದು ಬೈರತಿ ಸುರೇಶ, ಯತೀಂದ್ರ ಸಿದ್ದರಾಮಯ್ಯ ಆಗಮನ: ಆನಂದ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ಬಳಗಾನೂರು ಪಟ್ಟಣದ ಬಸವೇಶ್ವರ ನಗರದಲ್ಲಿ ನೂತನವಾಗಿ ಸ್ಥಾಪನೆ ಮಾಡಿರುವ ಕ್ರಾಂತಿವೀರ ಸಂಗೋಳ್ಳಿ ರಾಯಣ್ಣನ ಮೂರ್ತಿ ಅನಾವರಣ ಕಾರ್ಯಕ್ರಮಕ್ಕೆ ಮಾ.29 ರಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ ಹಾಗೂ ಯತೇಂದ್ರ ಸಿದ್ಧರಾಮಯ್ಯ ಆಗಮಿಸಲಿದ್ದಾರೆಂದು ಕುರುಬ ಸಮಾಜದ**



**ಯುವ ಮುಖಂಡ ಆನಂದ ಕನಸಾವಿ ಶುಕ್ರವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದರು.**

ಸಿದ್ದರಾಮನಂದಪುರಿ ಮಹಾಸ್ವಾಮಿಗಳು ದಿವ್ಯ ಪ್ರಭೆವಹಿಸಲಿದ್ದಾರೆ. ಕ್ರಾಂತಿವೀರ ಸಂಗೋಳ್ಳಿ ರಾಯಣ್ಣನ ಮೂರ್ತಿ ಅನಾವರಣ ಕಾರ್ಯಕ್ರಮಕ್ಕೆ ಮಾಜಿ ಸಂಸದ ಕೆ.ವಿರುಪಾಕ್ಷಪ್ಪ, ಸಂಸದ ರಾಜಶೇಖರ ಹಿಟ್ನಾಳ, ಶಾಸಕರಾದ ಆರ್.ಬಸನಗೌಡ ತುರವಿಹಾಳ, ದೊಡ್ಡನಗೌಡ ಪಾಟೀಲ್, ರಾಘವೇಂದ್ರ ಹಿಟ್ನಾಳ, ಕೆ.ಕ–ರಿಯಪ್ಪ ಸೇರಿದಂತೆ ವಿವಿಧ ಮಠಧೀಶರು, ಮುಖಂಡರುಗಳು ಭಾಗವಹಿಸಲಿದ್ದಾರೆ. ಆದ್ದರಿಂದ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಸಂಗೋಳ್ಳಿ ರಾಯಣ್ಣ ಮೂರ್ತಿ ಅನಾವರಣ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕೋರಿದರು.

# ಮಹಿಳೆಯರಿಗಾಗಿ ಉಚಿತ ಟೈಲರಿಂಗ್ ತರಬೇತಿ ಹಾಗೂ ಗ್ರಾಮಗಳಲ್ಲಿ ಓಪನ್ ಜಿಮ್ ಸ್ಥಾಪನೆ.

ನೈಜ್ಯ ದೆಸೆ ನ್ಯೂಸ್

**ಆಳಂದ: ಸಘ್ವಿ ಮೂವರ್ಸ್ ಲಿಮಿಟೆಡ್ (SAGHVI MOVERS LIMITED) ಮತ್ತು ಸಾನ್‌ಗ್ರೀನ್ ಫ್ಯೂಚರ್ ರಿನ್ಯೂವಬಲ್ಸ್ ಪ್ರೈವೇಟ್ ಲಿಮಿಟೆಡ್ (Sangreen Future Renewables Private Limited) ತಾಲ್ಲೂಕಿನ ಭೀಂಪುರ, ಕಮನಹಳ್ಳಿ, ದರ್ಗಾಸಿರೂರ, ಅಲ್ಲಾಪುರ, ನಾಗಲಗಾವ್, ನಿರಗುಡಿ, ಪರಸಾವಳ್ಳಿ, ಸಾವಲೇಶ್ವರ, ಸಕ್ಕರಗಾ ಮತ್ತು ಸರಸಾಂಬಾ ಗ್ರಾಮಗಳಲ್ಲಿ ಸಮುದಾಯ ಅಭಿವೃದ್ಧಿಯ ನಿಟ್ಟಿನಲ್ಲಿ ಬೃಹತ್ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (CSR) ಕಾರ್ಯಕ್ರಮಗಳನ್ನು ಉದ್ಘಾಟನೆ ನಡೆಯಿತು.**

ಈ ಎಲ್ಲಾ ಯೋಜನೆಗಳನ್ನು ಜೀವನ ಪ್ರಕಾಶ್ ಚಾರಿಟೇಬಲ್ ಸೊಸೈಟಿ ಅನುಷ್ಠಾನಗೊಳಿಸಿದ್ದು, ಸಘ್ವಿ ಮೂವರ್ಸ್ ಮತ್ತು ಸಾನ್‌ಗ್ರೀನ್ ಫ್ಯೂಚರ್ ಸಂಸ್ಥೆಗಳು ಸಂಪೂರ್ಣ ಆರ್ಥಿಕ ನೆರವು ನೀಡಿವೆ. ಪ್ರಮುಖ ಸೇವಾ ಕಾರ್ಯಗಳು: ಶಿಕ್ಷಣ: ನಾಗಲಗಾವ್, ನಿರಗುಡಿ ಮತ್ತು




ಪರಸಾವಳ್ಳಿ ಸರ್ಕಾರಿ ಹೈಯರ್ ಪ್ರೈಮರಿ ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಟಿವಿಗಳನ್ನು ವಿತ–ರಿಸುವ ಮೂಲಕ ಡಿಜಿಟಲ್ ಶಿಕ್ಷಣಕ್ಕೆ ಒತ್ತು ನೀಡಲಾಯಿತು. ಅಲ್ಲಾಪುರ ಶಾಲೆಯ ಮಕ್ಕಳಿಗೆ ಬೆಂಚ್ ಮತ್ತು ಕುರ್ಚಿಗಳನ್ನು ಒದಗಿಸಲಾಗಿದೆ. ಆರೋಗ್ಯ ಮತ್ತು ಕುಡಿಯುವ ನೀರು: ಆರು ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿಗಾಗಿ ಖಔ ಪ್ಲಾಂಟ್‌ಗಳನ್ನು ಅಳವಡಿಸಲಾಗಿದೆ ಹಾಗೂ ಎರಡು ಕಡೆಗಳಲ್ಲಿ ಉಚಿತ ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಯಿತು. ಕ್ರೀಡೆ ಮತ್ತು ಫಿಟ್‌ನೆಸ್: ಭೀಂಪುರ, ಕಮನಹಳ್ಳಿ, ದರ್ಗಾಸಿರೂರ ಮತ್ತು ಸಾವಲೇಶ್ವರ ಗ್ರಾಮಗಳ ಶಾಲೆಗಳಿಗೆ ಕ್ರೀಡಾ ಸಾಮಗ್ರಿ ವಿತರಿಸಲಾಯಿತು.

ಕಮನಹಳ್ಳಿ ಗ್ರಾಮದಲ್ಲಿ ಸಾರ್ವಜನಿಕ–ರಿಗಾಗಿ 'ಓಪನ್ ಜಿಮ್' ಸ್ಥಾಪಿಸಲಾಗಿದೆ. ಮಹಿಳಾ ಸಬಲೀಕರಣ: ನಿರಗುಡಿ ಮತ್ತು







ಪರಸಾವಳ್ಳಿ ಗ್ರಾಮಗಳ 55 ಮಹಿಳೆಯರಿಗೆ ಉಚಿತ ಕಟಿಂಗ್ ಮತ್ತು ಟೈಲರಿಂಗ್ ತರಬೇತಿ ನೀಡಿ, ಪ್ರಮಾಣಪತ್ರ ವಿತರಿಸುವ ಮೂಲಕ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲಾಯಿತು. **ಗಣ್ಯರ ಮಾತು:** ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಾನ್‌ಗ್ರೀನ್ ಫ್ಯೂಚರ್ ರಿನ್ಯೂವಬಲ್ಸ್‌ನ ಪ್ರಾಜೆಕ್ಟ್ ಮ್ಯಾನೇಜರ್ ಶ್ರೀ ಸನ್ನಿ ಗುಪ್ತಾ ಮಾತನಾಡಿ, "ನಮ್ಮ ಗುರಿ ಕೇವಲ ವಿದ್ಯುತ್ ಉತ್ಪಾದನೆಯಲ್ಲ, ಗ್ರಾಮೀಣ ಭಾಗದ ಜನರ ಜೀವನಮಟ್ಟ ಸುಧಾರಿಸುವುದೂ ಆಗಿದೆ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಸಕಾರಾತ್ಮಕ ಬದಲಾವಣೆ ತರಲು ನಾವು ಬದ್ಧರಾಗಿದ್ದೇವೆ," ಎಂದರು. ಶ್ರೀ ರಾಜಾ ಅವರು ಮಾತನಾಡಿ, "ಮುಂದಿನ ಪೀಳಿಗೆಯನ್ನು ಸಬಲಗೊಳಿಸಲು ಇಂತಹ ಸೌಲಭ್ಯಗಳು ಅಗತ್ಯ. ಮಕ್ಕಳು ಮತ್ತು ಯುವಕರು ಆತ್ಮನಿರ್ಭರರಾಗಲು ಈ ಉಪಕ್ರಮಗಳು ನೆರವಾಗಲಿವೆ," ಎಂದು ಆಶಿಸಿದರು.

ಈ ಕಾರ್ಯಕ್ರಮದಲ್ಲಿ ಸಾನ್‌ಗ್ರೀನ್ ಸಂಸ್ಥೆಯ ಶ್ರೀ ಅಝುರ್, ಶ್ರೀ ಸತೀಶ್ ಹಾಗೂ ಜೀವನ ಪ್ರಕಾಶ್ ಚಾರಿಟೇಬಲ್ ಸೊಸೈಟಿಯ ಶ್ರೀ ಅಮಿತ್ ಸಾಗರ್ ಮತ್ತು ಶ್ರೀ ಪವನ್ ಕುಮಾರ್ ಉಪಸ್ಥಿತರಿದ್ದರು. ಅಮಿತ್ ಸಾಗರ್ ಕಾರ್ಯಕ್ರಮ ನಿರೂಪಿಸಿದರೆ, ಪವನ್ ಕುಮಾರ್ ಅವರು ಸಮನ್ವಯತೆ ವಹಿಸಿದ್ದರು. ವಿವಿಧ ಶಾಲೆಗಳ ಮುಖ್ಯ ಶಿಕ್ಷಕರು ಮತ್ತು ಗ್ರಾಮಸ್ಥರು ಕಂಪನಿಗಳ ಈ ಸಾಮಾಜಿಕ ಕಳಕಳಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### B.Tech in Energy Engineering

B.Tech in Energy Engineering (ಎನರ್ಜಿ ಇಂಜಿನಿಯರಿಂಗ್) ಎಂಬುದು 4 ವರ್ಷಗಳ (8 ಸೆಮಿಸ್ಟರ್‌ಗಳು) ಪದವಿ ಕೋರ್ಸ್ ಆಗಿದೆ. ಇದು ಸಾಂಪ್ರದಾಯಿಕ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳು (ಸೌರ, ಪವನ), ಶಕ್ತಿ ದಕ್ಷತೆ ಮತ್ತು ಸುಸ್ಥಿರ ತಂತ್ರಜ್ಞಾನಗಳ ಮೇಲೆ ಕೇಂದ್ರೀಕರಿಸುತ್ತದೆ. ಇದು ಮೆಕ್ಯಾನಿಕಲ್ ಮತ್ತು ಎಲೆಕ್ಟ್ರಿಕಲ್ ಇಂಜಿನಿಯರಿಂಗ್‌ನ ಮಿಶ್ರಣವಾಗಿದ್ದು, ವಿದ್ಯುತ್ ಉತ್ಪಾದನೆ ಮತ್ತು ನಿರ್ವಹಣೆಗೆ ಸಂಬಂಧಿಸಿದ ಕ್ಷೇತ್ರವಾಗಿದೆ. ಕೋರ್ಸ್ ವಿವರಗಳು (Course Details): ಅರ್ಹತೆ (Eligibility): ಪಿಯುಸಿ (12th) ನಲ್ಲಿ ಪಿಸಿಎಂ (Physics, Chemistry, Maths) ನಲ್ಲಿ ಕನಿಷ್ಠ 50% ಅಂಕಗಳನ್ನು ಪಡೆದಿರಬೇಕು. ಪ್ರವೇಶ ಪರೀಕ್ಷೆ (Entrance Exams): ಕೆಸಿಇಟಿ (KCET), ಜೆಇಇ (JEE Main), ಕಾಮೆಡ್–ಕೆ (COMEDK). ಪ್ರಮುಖ ವಿಷಯಗಳು (Syllabus): ಥರ್ಮೋಡೈನಾಮಿಕ್ಸ್, ಸೌರ ಶಕ್ತಿ, ಪವನ ಶಕ್ತಿ, ಇಂಧನ ಸಾರಿಗೆ, ಪರಿಸರ ವಿಜ್ಞಾನ, ಎಲೆಕ್ಟ್ರಿಕಲ್ ಪವರ್ ಸಿಸ್ಟಮ್ಸ್. ಉದ್ಯೋಗಾವಕಾಶಗಳು (Job Prospects): ಎನರ್ಜಿ ಮ್ಯಾನೇಜರ್, ಸೋಲಾರ್ ಇಂಜಿನಿಯರ್, ಪವರ್ ಪ್ಲಾಂಟ್ ಇಂಜಿನಿಯರ್, ಅನ್ವಯಿಕ ಸಂಶೋಧಕ. ಅನುಕೂಲಗಳು: ಬೆಳೆಯುತ್ತಿರುವ ಹಸಿರು ಇಂಧನ (Green Energy) ಕ್ಷೇತ್ರದಲ್ಲಿ ಹೆಚ್ಚಿನ ಉದ್ಯೋಗ ಅವಕಾಶಗಳು. ಸರ್ಕಾರಿ ಮತ್ತು ಖಾಸಗಿ ವಲಯಗಳಲ್ಲಿ (BHEL, NTPC, Renewable Energy firms) ಕೆಲಸದ ಅವಕಾಶ.

# ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ತಾಲ್ಲೂಕಿನ ಅಸ್ಕಿ ಗ್ರಾಮದಲ್ಲಿ ಈರಮ್ಮ ಪ್ಯಾಟಿ ಅವರಿಗೆ ವಾತ್ಸಲ್ಯ ಮನೆ ಮಂಜೂರಾತಿ ಆಗಿದ್ದು ಗುರುವಾರ ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮ ಜರುಗಿತು.**

ಜಿಲ್ಲಾ ನಿರ್ದೇಶಕರು ಮೋಹನ್ ನಾಯ್ಕ್ ಅವರು ದೀಪ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ವೀರೇಂದ್ರ ಹೆಗ್ಗಡೆ ಮತ್ತು ಮಾತೃಶ್ರೀ ಹೇಮಾವತಿ ಅಮ್ಮನವರ ಆಶಾದಾಯಕ ಕಾರ್ಯಕ್ರಮ ವಾತ್ಸಲ್ಯ ಮನೆ ರಚನೆ, ಮಾಸಾಶಾನ ಪಲಾನುಭವಿಗಳಿಗೆ ನಿರ್ಗತಿಕರಿಗೆ ಸೂರಿಲ್ಲದವರಿಗೆ ಆಶ್ರಯ ಒದಗಿಸುವ ನಿಟ್ಟಿನಲ್ಲಿ ಪೂಜ್ಯರು ವಾತ್ಸಲ್ಯ ಮನೆ ರಚನೆ ಮಾಡುತ್ತಿದ್ದಾರೆ. ಯೋಜನೆಯಲ್ಲಿ ಸುಮಾರು 18000 ವಾತ್ಸಲ್ಯ ಪಲಾನುಭವಿಗಳಿಗೆ ಪ್ರತಿ ತಿಂಗಳು ಮಾಸಾಶಾನ ರೂ1000, ನೀಡಲಾಗುತ್ತಿದ್ದು 800 ವಾತ್ಸಲ್ಯ ಮನೆ ರಚನೆ ಮಾಡಿದ್ದು ಪಲಾನುಭವಿಗಳು ನೆಮ್ಮದಿಯ ಜೀವನ ನಡೆಸಲು ದಾರಿಮಾಡಿ ಕೊಟ್ಟಿದ್ದಾರೆ ಇಷ್ಟೇ ಅಲ್ಲದೇ ಪೂಜ್ಯರು ಕೆರೆ ಹೂಳೆತ್ತುವುದು,



ಸುಜ್ಞಾನ ಶಿಷ್ಯ ವೇತನ, ಜ್ಞಾನ ದೀಪ ಶಿಕ್ಷಕರ ನೇಮಕಾತಿ ಇನ್ನು ಹಲವಾರು ಕಾರ್ಯಕ್ರಮಗಳ ಮೂಲಕ ಸಮಾಜಕ್ಕೆ ದಾ–ರಿದೀಪವಾಗಿದ್ದಾರೆ ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ಕೆರೆ ಸಮಿತಿಯ ಅಧ್ಯಕ್ಷ ಜಲಪುರ ಸಿದ್ದನ ಗೌಡ ಬಸವನಗೌಡ ಬಿರಾದರ ಅವರು ಮಾತನಾಡಿ ಸರ್ಕಾರ ಮಾಡದಂತಹ ಕಾರ್ಯಕ್ರಮಗಳನ್ನು ಪೂಜ್ಯರು ಮಾಡುತ್ತಿದ್ದಾರೆ ಅವರ ಕಾರ್ಯಕ್ರಮಗಳಲ್ಲಿ ನಾವು ಪಾಲ್ಗೊಂಡಿರುವುದು ನಮ್ಮೆಲ್ಲರ ಪುಣ್ಯ ಮಂಜುನಾಥ ಸ್ವಾಮಿ ಪೂಜ್ಯರಿಗೆ ಮತ್ತು ಅಮ್ಮನವರಿಗೆ ಆಯುಷ್ಯ ಆರೋಗ್ಯ ಕೊಟ್ಟು ಕಾಪಾಡಲಿ ಎಂದು ಹಾರೈಸಿದರು ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಪ್ರಭುಗೌಡ ಬಿರಾದಾರ್ ಅವರ ಮಾತನಾಡಿ ಮಕ್ಕಳಿಲ್ಲದ–ರಿಗೆ ನಿರ್ಗತಿಕರಿಗೆ ವಾತ್ಸಲ್ಯ ಅಂದರೆ ತಾಯಿಯ ಮಮತೆ, ಕರುಣೆಯ ಪ್ರತಿರೂಪವೇ" ವಾತ್ಸಲ್ಯಮನೆ " ಇಂತಹ ಕಾರ್ಯಕ್ರಮಗಳಿಗೆ ನಮ್ಮ ಸಹಕಾರ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಗನಗೌಡ ವನಕಿಹಾಳ, ಸಿ.ಎಂ. ಟಕ್ಕಳಿಕೆ ವಿಶ್ವನಾಥ್ ಕಾಶಿನಾಥ್ ತಳವಾರ್ ಬಿಜಾಪುರ ಜಿಲ್ಲಾ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರು , ಅಯ್ಯಪ್ಪ ಮುಗುಳಿ ಗ್ರಾಮ ಪಂಚಾಯಿತಿ ಸದಸ್ಯರು, ರೇವಣಸಿದ್ಧ ಕವಡಿಮಠ ಗ್ರಾಮ ಪಂಚಾಯಿತಿ ಸದಸ್ಯರು , ಊರಿನ ಗಣ್ಯರಾದ ಶಾಂತಯ್ಯ ಚನ್ನಬಸಯ್ಯ ಹಿರೇಮಠ , ಎಂ.ಕೆ. ಇಂಚಗೇರಿ , ರೇವಣಸಿದ್ದಪ್ಪ ಹಂಚಲಿ, ಬಾಲಪ್ಪ ಗೌಡ ಬಿರಾದರ್, ಬಸವರಾಜ ಎಂ. ಪಡಶೆಟ್ಟಿ, ಜ್ಞಾನ ವಿಕಾಸ ಸಮನ್ವಯಧಿಕಾರಿ ಆಶಾ ರಿಕವರಿ ಮೇಲ್ವಿಚಾರಕ ಹನುಮಂತ, ವಲಯದ ಮೇಲ್ವಿಚಾರಕ ಸಿದ್ದಲಿಂಗಪ್ಪ, ಸ್ಥಳೀಯ ಸೇವಾ ಪ್ರತಿನಿಧಿ ನೀಲಮ್ಮ , ಸೇವಾದಾರರು ನಿರ್ಮಲ ಮತ್ತು ಶ್ರೀದೇವಿ, ಸುವಿಧಾ ಸಹಾಯಕರು, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು ತಾಲ್ಲೂಕು ಯೋಜನಾಧಿಕಾರಿ ಬಿನೋಯಿ ಸ್ವಾಗತಿಸಿದರು ತಾಲ್ಲೂಕು ಲೆಕ್ಕ ಪರಿಶೋಧಕ ಘನರಾಜ್ ವಂದಿಸಿದರು.

## ಜಾಗತಿಕವಾಗಿ 1088 ಕೋಟಿ ರೂ. ಬಾಚಿ ಹೊಸ ದಾಖಲೆ ಬರೆದ ಧುರಂಧರ್


ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಆದಿತ್ಯಧರ್ ಅವರ ಧುರಂಧರ್ ದಿ ರಿವೆಂಜ್ ಚಿತ್ರ ಬಿಡುಗಡೆಯಾದ ಮೊದಲ ವಾರದಲ್ಲೇ ಬಾಕ್ಸ್ ಆಫೀಸ್ ದಾಖಲೆ ಮುರಿದಿದ್ದು, ವಿಶ್ವಾದಾದ್ಯಂತ ಗಳಿಕೆ 1,088 ಕೋಟಿ ರೂ. ದಾಟಿದೆ. ಇದು ಭಾರತೀಯ ಸಿನಿಮಾ ಇತಿಹಾಸದಲ್ಲೆ ಅತಿದೊಡ್ಡ ಬ್ಲಾಕ್‌ಬಸ್ಟರ್‌ಗಳಲ್ಲಿ ಒಂದಾಗಿದೆ.**



ಜಿಯೋ ಸ್ಟುಡಿಯೋಸ್ ಮತ್ತು ಬಿ62 ಸ್ಟುಡಿಯೋಸ್ ಪ್ರಕಾರ, ರಣವೀರ್ ಸಿಂಗ್ ಅಭಿನಯದ ಸ್ಪೈ ಥ್ರಿಲ್ಲರ್ ಚಿತ್ರವು ತನ್ನ ಎಂಟು ದಿನಗಳ ಆರಂಭಿಕ ವಾರದಲ್ಲಿ ಭಾರತದಲ್ಲಿ 814 ಕೋಟಿ ರೂ.ಗಳನ್ನು ಮತ್ತು ವಿದೇಶಗಳಲ್ಲಿ 274 ಕೋಟಿ ರೂ.ಗಳನ್ನು ಸಂಗ್ರಹಿಸಿದೆ. ವಿಶ್ವಾದ್ಯಂತ 1,088 ಕೋಟಿ ರೂ ಗಳಿಸಿದೆ. ಭಾರತದಲ್ಲಿ ಈ ಚಿತ್ರದ ವಾರದ ನಿವ್ವಳ ಸಂಗ್ರಹ 690 ಕೋಟಿ ರೂ.ಗಳಾಗಿದೆ. ಬ್ಲಾಕ್‌ಬಸ್ಟರ್ ಧುರಂಧ ಚಿತ್ರದ ಮುಂದುವರಿದ ಭಾಗವು ಹಿಂದಿನ ಎಲ್ಲಾ ಮಾನದಂಡಗಳನ್ನು ಮೀರಿ ಹೊಸ ದಾಖಲೆ ಸ್ಥಾಪಿಸಿದೆ ಮತ್ತು ವಿಶ್ವಾದ್ಯಂತ ವೇಗವಾಗಿ 1000 ಕೋಟಿ ರೂ. ಗಳಿಸುವ ಮೂಲಕ ಜಾಗತಿಕವಾಗಿ ಭಾರತೀಯ ಸಿನಿಮಾವೊಂದು 8 ದಿನಗಳಲ್ಲಿ ಅತ್ಯಂತ ಬಲಿಷ್ಠ ಗಳಿಕೆಯೊಂದಿಗೆ ಹೊಸ ದಾಖಲೆ ಸೃಷ್ಟಿಸಿದೆ ಎಂದು ತಯಾರಕರು ತಿಳಿಸಿದ್ದಾರೆ. ಈ ಚಿತ್ರವು ಒಂದೇ ದಿನದಲ್ಲಿ ಒಂದೇ ಭಾಷೆಯಲ್ಲಿ 100 ಕೋಟಿ ರೂ. ಮೈಲಿಗಲ್ಲು ದಾಟಿದ ಮೊದಲ ಭಾರತೀಯ ಚಿತ್ರವಾಗಿದೆ. ತನ್ನ ಮೊದಲ ನಾಲ್ಕು ದಿನಗಳಲ್ಲಿ ಜಾಗತಿಕವಾಗಿ 761 ಕೋಟಿ ರೂ. ಗಳಿಸಿದ್ದು, ಸೋಮವಾರ 64 ಕೋಟಿ, ಮಂಗಳವಾರ 58 ಕೋಟಿ, ಬುಧವಾರ 49 ಕೋಟಿ ಹಾಗೂ ಗುರುವಾರ ಭಾರತದಲ್ಲಿ 53 ಕೋಟಿ ರೂ. ಗಳಿಸಿದೆ. ಭಾರತದಲ್ಲಿ ಮೊದಲ ದಿನದಂದು ಒಟ್ಟು 145 ಕೋಟಿ ರೂ. (ನಿವ್ವಳ) ಗಳಿಸಿದೆ. ಧರ್ ಅವರ 2025ರ ಬ್ಲಾಕ್‌ಬಸ್ಟರ್ ಚಿತ್ರದ ಮುಂದುವರಿದ ಭಾಗವಾದ ಈ ಚಿತ್ರವು ಮಾರ್ಚ್ 19ರಂದು ಹಿಂದಿ, ತೆಲುಗು, ತಮಿಳು, ಕನ್ನಡ ಮತ್ತು ಮಲಯಾಳಂ ಭಾಷೆಗಳಲ್ಲಿ ಬಿಡುಗಡೆಯಾಯಿತು. ಇದರಲ್ಲಿ ಸಿಂಗ್, ಆರ್.ಮಾಧವನ್, ಅರ್ಜುನ್ ರಾಂಪಾಲ್, ಸಂ–ಜಯ್ ದತ್, ಸಾರಾ ಅರ್ಜುನ್ ಮತ್ತು ರಾಕೇಶ್ ಬೇಡಿ ನಟಿಸಿದ್ದಾರೆ.

# ಶ್ರೀರಾಮನವಮಿ :ಹಿಂದೂಪರ ಸಂಘಟನೆಗಳಿಂದ ಪಾನಕ, ಮಜ್ಜಿಗೆ ವಿತರಣೆ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಬಸವ ವೃತ್ತದಲ್ಲಿ ಹಿಂದೂಪರ ಸಂಘಟನೆಗಳ ವತಿಯಿಂದ ನಡೆದ ಶ್ರೀರಾಮನವಮಿ ಕಾರ್ಯಕ್ರಮದಲ್ಲಿ ಕಲ್ಮಠ ಶ್ರೀ ವಿರೂಪಾಕ್ಷ ಶಿವಾಚಾರ್ಯ**



**ಮಹಾಸ್ವಾಮಿಗಳು ಶ್ರೀರಾಮದೇವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಆಶೀರ್ವಚನ ನೀಡಿದರು.**

ಅಯೋಧ್ಯ ಪುರುಷ ಶ್ರೀರಾಮಚಂದ್ರ ಪ್ರಭುವಿನ ಆದರ್ಶವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಜೊತೆಗೆ ಶ್ರೀರಾಮರಾಜ್ಯದ ಕಲ್ಪನೆ ನೆರವೇರಲಿ ಎಂಬ ಆಶಯ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕ–ರಿಗೆ ಪಾನಕ ಹಾಗೂ ಮಜ್ಜಿಗೆ ವಿತರಣೆ ಮಾಡಲಾಗಿದ್ದು, ಭಕ್ತರು ಉತ್ಸಾಹದಿಂದ ಭಾಗವಹಿಸಿದರು. ಧಾರ್ಮಿಕ ಹಾಗೂ ಸಾಂಸ್ಕೃತಿಕ ಸೌಹಾರ್ದತೆಯನ್ನು ಪ್ರತಿಬಿಂಬಿಸುವಂತೆ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ವಿಶ್ವಹಿಂದೂ ಪರಿಷತ್ ತಾಲೂಕು ಅಧ್ಯಕ್ಷ ವಿಜಯೇಂದ್ರ ಇಬ್ರಮಾಪುರ್, ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹ–ರಿಹಾರಪಾಟೀಲ್, ಬಿಜೆಪಿ ಮಾನ್ವಿ ಮಂಡಲ ಅಧ್ಯಕ್ಷ ವೀರಭದ್ರಗೌಡ ಭೋಗವತಿ, ಅಖೀಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ಅರುಣಕುಮಾರಚಂದಾ, ನಗರೇಶ್ವರ ರ‍್ಯಾವೈಶ್ಯ ಸಮಾಜದ ತಾಲೂಕು ಅಧ್ಯಕ್ಷ ಮುತ್ತುರಾಜ್ ಶೆಟ್ಟಿ, ಸುರೇಶನಾಡಗೌಡ, ವೀರೇಶನಾಯಕ ಬೆಟ್ಟದೂರು, ಮೌನೇಶ, ಸಂಗಮೇಶಗೌಡ, ರಾಜಶೇಖರಸ್ವಾಮಿ, ಪ್ರವೀಣ್ ಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಎಸ್ಸೆಸ್ಸೆಲ್ಸಿ ತೃತೀಯ ಭಾಷೆ ಪರೀಕ್ಷೆ ಮಾರ್ಚ್ 31ಕ್ಕೆ ಮುಂದೂಡಿಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪ್ರಸ್ತುತ ನಡೆಯುತ್ತಿರುವ 2026ರ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರ ಮಾರ್ಚ್ 30ರಂದು ನಡೆಯಬೇಕಿದ್ದ ತೃತೀಯ ಭಾಷೆ ಪರೀಕ್ಷೆಯನ್ನು ಮಾರ್ಚ್ 31ರ ಮಂಗಳವಾರಕ್ಕೆ ಮುಂದೂಡಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.**

ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ನ್ನು ದಿನಾಂಕ: 18.03.2026 ರಿಂದ 02.04.2026ರವರೆಗೆ ನಡೆಸಲು ಮಂಡಳಿಯಿಂದ ದಿನಾಂಕ: 04.11.2025ರಂದು ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸಲಾಗಿ–ತ್ತು. ಅದರಂತೆ ಈಗಾಗಲೇ ಪರೀಕ್ಷೆಯು ಪ್ರಾರಂಭವಾಗಿರುತ್ತದೆ. ಈ ವೇಳಾಪಟ್ಟಿಯನ್ವಯ




ತೃತೀಯ ಭಾಷೆ ಪರೀಕ್ಷೆಯನ್ನು ದಿನಾಂಕ: 30.03.2026ರಂದು ನಿಗಧಿಪಡಿಸಲಾಗಿತ್ತು. ಆದರೆ, ಸರ್ಕಾರದ ಅಧಿಸೂಚನೆಯನ್ವಯ ಮಹಾವೀರ ಜಯಂತಿ ಪ್ರಯುಕ್ತ ಘೋಷಿಸಲಾಗಿರುವ ಸಾರ್ವತ್ರಿಕ ರಜಾ ದಿನವನ್ನು ದಿನಾಂಕ: 31.03.2026ರ ಮಂಗಳವಾರ ಬದಲಾಗಿ ದಿನಾಂಕ: 30.03.2026ರ ಸೋಮವಾರ ದಂದು ಸಾರ್ವತ್ರಿಕ ರಜಾ ದಿನವೆಂದು ಮಾರ್ಪಡಿಸಿ ಆದೇಶಿಸಲಾಗಿದೆ.

ಈ ಸಂಬಂಧ ಅಧ್ಯಕ್ಷರು ಕರ್ನಾಟಕ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿ ಬೆಂಗಳೂರು ಇವರ ಸುತ್ತೋಲೆ ದಿನಾಂಕ 26–03–2026ರನ್ವಯ ದಿನಾಂಕ 30.03.2026ರಂದು ನಿಗಧಿಪಡಿಸಲಾಗಿದ್ದ ಎಸ್ಸೆಸ್ಸೆಲ್ಸಿ ತೃತೀಯ ಭಾಷೆ ವಿಷಯದ ಪರೀಕ್ಷೆಯನ್ನು ದಿನಾಂಕ 31.03.2026ರ ಮಂಗಳವಾರದಂದು ಈಗಾಗಲೇ ನಿಗದಿಪಡಿಸಿರುವ ಅವಧಿಯಲ್ಲಿ ನಡೆಸಲಾಗುವುದು. ಉಳಿದ ವಿಷಯದ ಪರೀಕ್ಷೆಗಳು ವೇಳಾಪಟ್ಟಿಯಂತೆ ಯಥ–ಾವತ್ತಾಗಿ ನಡೆಯಲಿವೆ ಎಂದು ಶಾಲಾ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ನಿತೀಶ್ ಕೆ ನಿರ್ದೇಶನ

## ರಾಯಚೂರು ಜಿಲ್ಲೆಯ 250 ಗ್ರಾಮಗಳಲ್ಲೂ ಬಾಲ್ಯ ವಿವಾಹಗಳು ಸಂಪೂರ್ಣ ನಿಲ್ಲಬೇಕು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲೆಯ 250 ಗ್ರಾಮಗಳಲ್ಲೂ ಬಾಲ್ಯ ವಿವಾಹಗಳು ಸಂಪೂರ್ಣ ನಿಲ್ಲಬೇಕು. ಹೆಚ್ಚಾಗಿ ಸಾಮೂಹಿಕ ವಿವಾಹ ಸಂದರ್ಭದಲ್ಲಿಯೇ ಚೈಲ್ಡ್ ಮ್ಯಾರೇಜ್‌ಗಳು ನಡೆಯುವ ಸಾಧ್ಯತೆ ಇದ್ದು, ಈ ಬಗ್ಗೆ ವಿಶೇಷ ನಿಗಾವಹಿಸಬೇಕು. ಇನ್ಮುಂದೆ ಯಾವುದೇ ಕಡೆಗಳಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಎಚ್ಚರಿಕೆ ವಹಿಸಿ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾ–ರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.**

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಮಾರ್ಚ 27ರಂದು ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಾಲ್ಯ ವಿವಾಹ ಅನಿಷ್ಠ ಪದ್ಧತಿಯಾಗಿದೆ. ಜನರಲ್ಲಿ ಜಾಗೃತಿಯ ಕೊರತೆಯಿಂದಾಗಿಯೂ ಬಾಲ್ಯ ವಿವಾಹಗಳು ನಡೆಯುತ್ತವೆ. ಈ ಬಗ್ಗೆ ಜನತೆಗೆ ನಿರಂತರವಾಗಿ ಅರಿವು ಮೂಡಿಸುವುದರ ಜೊತೆಗೆ ಯಾವುದೇ ಕಡೆಗಳಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ನೋಡಿಕೊಳ್ಳುವುದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇ–ರಿದಂತೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ರಾಯಚೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗೆ ಏನು ಮಾಡಬಹುದು ಎಂಬುದರ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ



ಇಲಾಖೆಯು ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ರಾಯಚೂರು, ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರ, ಸಿರವಾರ, ಅರಕೇರಾ ಮತ್ತು ದೇವದುರ್ಗ ಸೇರಿದಂತೆ ಇನ್ನೀತರ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸೇ–ರಿದಂತೆ ಎಲ್ಲ ಅಧಿಕಾರಿಗಳು ಒಗ್ಗೂಡಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಬಾಲ್ಯ ವಿವಾಹಗಳು ಯಾವ ಕಡೆಗಳಲ್ಲಿ ಹೆಚ್ಚಾಗಿ ನಡೆಯಬಹುದು ಎಂಬುದರ ಬಗ್ಗೆ ಅರಿಯಬೇಕು.

ಬಾಲ್ಯ ವಿವಾಹವಾಗುತ್ತಿರುವ ಬಗ್ಗೆ ಮಾಹಿತಿ ಬಂದ ಕೂಡಲೇ ಅಧಿಕಾರಿಗಳು ಜಾಗೃತರಾಗಿ ಸ್ಥಳಕ್ಕೆ ದಾವಿಸಿ ಬಾಲ್ಯ ವಿವಾಹ ನಿಲ್ಲಿಸಿ, ಬಾಲ್ಯವಿವಾಹ ತಡೆ ಕಾಯ್ದೆಯಡಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ಬಾಲ್ಯವಿವಾಹಕ್ಕೆ ಸಹಕರಿಸಿದ, ಪ್ರೇರೇಪಿಸಿದವರ ಮೇಲೆ ಯಾವುದೇ ಮುಲಾಜಿಲ್ಲದೇ ಕ್ರಮ ವಹಿಸಬೇಕು. ಎಫ್‌ಐಆರ್ ದಾಖಲಿಸಿ ಬಿಸಿ ಮುಟ್ಟಿಸಬೇಕು ಎಂದು ಜಿಲ್ಲಾಧಿಕಾರಿಗಳು ಆದೇಶಿಸಿದರು. ಜಿಲ್ಲೆಯಲ್ಲಿ ದಾಖಲಾದ ಪೋಕ್ಸೊ ಪ್ರಕರಣಗಳ ಬಗ್ಗೆ ತಾಲೂಕುವಾರು ಮಾಹಿತಿ ನೀಡಬೇಕು. ಇದುವರೆಗೆ ದಾಖಲಾದ ಪ್ರಕರಣಗಳೆಷ್ಟು? ಆಯಾ ಪ್ರಕರಣಗಳಡಿ ಯಾವ ಕ್ರಮವಾಗಿದೆ? ಎಂಬುವುದರ ಬಗ್ಗೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಬಾಲ ಗರ್ಭಿಣಿಯರ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು.

ಆರೋಗ್ಯ ಇಲಾಖೆಯು ತಿಂಗಳುವಾರು ದತ್ತಾಂಶಗಳನ್ನು ಜಿಲ್ಲಾಡಳಿತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಒದಗಿಸಬೇಕು. ಇದರಿಂದಾಗಿ ಜನಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದರು.



**ನೋಡಲ್ ಅಧಿಕಾರಿಗಳ ನೇಮಿಸಿ:** ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ತಡೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮಕ್ಕಾಗಿ ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲಿ ತಾಲೂಕು ಮಟ್ಟದ ಅಧಿಕಾರಿ ಒಬ್ಬರನ್ನು ನೊಡಲ್ ಅಧಿಕಾರಿಯಾಗಿ ನೇಮಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಬಾಲ್ಯ ವಿವಾಹ ತಡೆ ಕುರಿತು ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ ರೂಪಿಸಬೇಕು.

ಬಾಲ್ಯ ವಿವಾಹ ಅಪರಾಧ ಎಂದು ಜನತೆಗೆ ತಿಳಿಸಿ ಅರಿವು ಮೂಡಿಸಬೇಕು ಎಂದು ಸೂಚನೆ ನೀಡಿದರು. ಪೋಷಣ್ ಅಭಿಯಾನ ಯೋಜನೆಯಡಿ ಒಟ್ಟು 2,27,515 ಫಲಾನುಭವಿಗಳು ನೋಂದಣಿಯಾಗಿದ್ದು, ಶೇಕಡಾ 100 ರಷ್ಟು ಫಲಾನುಭವಿಗಳ ಆದ–ಾರ್ ಪರಿಶೀಲಿಸಲಾಗಿದೆ. ಶೇಕಡಾ 99.59 ರಷ್ಟು ಫಲಾನುಭವಿಗಳ ಮೊಬೈಲ್ ವೆರಿಫಿಕೇಶನ್ ಮುಗಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 2856 ಅಂಗನವಾಡಿಗಳ ಪೈಕಿ 1940 ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಣೆ ಮಾಡುತ್ತಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್‌ಕುಮಾರ ಅವರು ಸಭೆಗೆ ಮಾಹಿತಿ ನೀಡಿದರು.

**ಜಿಲ್ಲಾಧಿಕಾರಿಗಳು, ಜಿಪಂ ಸಿಇಓ ಕಾರ್ಯಕ್ಕೆ ಮೆಚ್ಚುಗೆ:** ರಾಯಚೂರು ಜಿಲ್ಲೆಯಲ್ಲಿ ಮಹಿಳಾ ಸ್ವಸಹಾಯ ಸಂಘಗಳ ವಿವಿಧ ಚಟುವಟಿಕೆಗಳ ಕಾರ್ಯರೂಪಕ್ಕೆ ತಂದು ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡುತ್ತಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮತ್ತು ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಇದೆ ವೇಳೆ ಸ್ತ್ರೀ ಶಕ್ತಿ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಶ್ರೀದೇವಿ ಶ್ರೀನಿವಾಸ ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಜಿಲ್ಲಾ ಮಕ್ಕಳ ರಕ್ಷಣ ಘಟಕದ ರಕ್ಷಣಾಧಿಕಾರಿ ಮನ್ಸೂರ್ ಅಹಮದ್ ಸೇರಿದಂತೆ ಸಂಕಲ್ಪ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮತ್ತು ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಭೆಯಲ್ಲಿ ಇದ್ದರು.